# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Regd No : G2/PMG/KA/NK/BM/157/26-28

Volume: 01 Issue : 75 THURSDAY 28-05-2026 PRGI No : KNKAN/26/A0962 Pages:4 Rs.2.00 M: 9742418836


## 'ಸಿದ್ದರಾಮಯ್ಯನವರು ಅಷ್ಟು ಸುಲಭವಾಗಿ ರಾಜೀನಾಮೆ ಕೊಡುವವರಲ್ಲ; ಮುಖ್ಯಮಂತ್ರಿ ಯಾರೇ ಆದರೂ ಮಧ್ಯಂತರ ಚುನಾವಣೆ ಖಂಡಿತ': ಬಿ.ವೈ ವಿಜಯೇಂದ್ರ




ಶಿವಮೊಗ್ಗ: ಕರ್ನಾಟಕದಲ್ಲಿ ನಾಯಕತ್ವ ಬದಲಾವಣೆ ಕುರಿತು ಊಹಾಪೋಹಗಳು ಜೋರಾಗಿರುವ ನಡುವೆಯೇ, ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರ ಉತ್ತಮ ಆಡಳಿತ ನೀಡಲು ವಿಫಲವಾಗಿದೆ ಎಂಬ ನಿರ್ಣಯಕ್ಕೆ ಕಾಂಗ್ರೆಸ್ ಹೈಕಮಾಂಡ್ ಬಂದಿದ್ದು, ಅದಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯರನ್ನು ಬದಲಾಯಿಸುವ ನಿರ್ಧಾರ ತೆಗೆದುಕೊಂಡಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಬುಧವಾರ ಹೇಳಿದ್ದಾರೆ.

ಮುಂದಿನ ಮುಖ್ಯಮಂತ್ರಿ ಯಾರೇ ಆದರೂ ಅವರು ಪೂರ್ಣಾವಧಿ ಮುಗಿಸುವುದಿಲ್ಲ, ರಾಜ್ಯದಲ್ಲಿ ಅವಧಿಗೂ ಮುನ್ನವೇ ವಿಧಾನಸಭೆ ಚುನಾವಣೆ ನಡೆಯಲಿದೆ ಎಂಬ ಭವಿಷ್ಯವಾಣಿಯನ್ನೂ ನುಡಿದರು.

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಕಳೆದ ಮೂರು ವರ್ಷಗಳಲ್ಲಿ ಉತ್ತಮ ಆಡಳಿತ ನೀಡಲು ವಿಫಲವಾಗಿದೆ ಎಂಬುದನ್ನು ಕಾಂಗ್ರೆಸ್ ಹೈಕಮಾಂಡ್ ಇಂದು ಒಪ್ಪಿಕೊಂಡಿದೆ. ಆದ್ದರಿಂದ ಮುಖ್ಯಮಂತ್ರಿ ಬದಲಾವಣೆ ಮಾಡಲು ತೀರ್ಮಾನಿಸಿದೆ ಎಂದು ಅವರು ಶಿವಮೊಗ್ಗದಲ್ಲಿ ಸುದ್ದಿಗಾರರಿಗೆ ತಿಳಿಸಿದರು.

ನಿನ್ನೆ ದೆಹಲಿಯಲ್ಲಿ ನಡೆದ ದೀರ್ಘ ಸಭೆಗಳ ಬಳಿಕ, ಸಿದ್ದರಾಮಯ್ಯ ಅವರು ರಾಜೀನಾಮೆ ನೀಡಬೇಕು ಎಂಬ ನಿರ್ಧಾರ ಅಂತಿಮಗೊಂಡಿದೆ ಎಂದು ಅವರು ಹೇಳಿದರು. ಮುಂದಿನ ಮುಖ್ಯಮಂತ್ರಿ ಯಾರು ಎನ್ನುವುದು ಮುಖ್ಯವಲ್ಲ. ರಾಜ್ಯದ ಆಡಳಿತದ ಸ್ಥಿತಿ ಏನಾಗಿದೆ ಎನ್ನುವುದೇ ಮುಖ್ಯ ಎಂದು ವಿಜಯೇಂದ್ರ ಹೇಳಿದರು.

ರಾಜ್ಯ ಯಾವ ದಿಕ್ಕಿಗೆ ಸಾಗುತ್ತಿದೆ ಎಂಬುದರ ಬಗ್ಗೆ ಪ್ರತಿಯೊಬ್ಬರೂ ಯೋಚಿಸಬೇಕಾದ ಪರಿಸ್ಥಿತಿ ಬಂದಿದೆ. ಕಾಂಗ್ರೆಸ್ ನಲ್ಲಿ ಒಳಜಗಳಗಳಿಂದ ಆಡಳಿತ ಸಂಪೂರ್ಣ ಕುಸಿದಿದೆ ಎಂದು ಅವರು ಆರೋಪಿಸಿದರು.

ಅಕ್ರಮಗಳ ಕುರಿತು ಮಾತನಾಡಿದ ಅವರು, ಪ್ರಸ್ತುತ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣ ಮತ್ತು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ನಿವೇಶನ ಹಂಚಿಕೆ ಹಗರಣಗಳಂತಹ ಪ್ರಕರಣಗಳು ನಡೆದಿವೆ ಎಂದು ಹೇಳಿದರು.

2024ರ ಲೋಕಸಭಾ ಚುನಾವಣೆಯ ವೇಳೆ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ 87 ಕೋಟಿ ರೂಪಾಯಿ ಹಣದ ಅಕ್ರಮ ವರ್ಗಾವಣೆಯನ್ನು ಉಲ್ಲೇಖಿಸುತ್ತಿದ್ದರು. ಈ ಪ್ರಕರಣದಲ್ಲಿ ಲೆಕ್ಕಾಧಿಕಾರಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿದ್ದರು. ಅವರು ಬರೆದಿದ್ದರು ಎನ್ನಲಾದ ಡೆತ್ ನೋಟ್ ನಲ್ಲಿ ಹಗರಣವನ್ನು ಬಹಿರಂಗಪಡಿಸಿತ್ತು.

ರಾಜ್ಯದಲ್ಲಿ ಅವಧಿಗೂ ಮುನ್ನ ಚುನಾವಣೆ ನಡೆಯಲಿದೆ ಎಂದು ಭವಿಷ್ಯ ನುಡಿದ ಅವರು, ಸಿದ್ದರಾಮಯ್ಯ ರಾಜೀನಾಮೆ ನೀಡಿ ಯಾರು ಬಂದರೂ ಆಡಳಿತದಲ್ಲಿ ಗೊಂದಲ ಉಂಟಾಗುವುದನ್ನು ಜನರು ಕಾಣುತ್ತಾರೆ ಎಂದರು.

ಕರ್ನಾಟಕದಲ್ಲಿ ಮುಂಗಡ ಚುನಾವಣೆ ಖಚಿತವಾಗಿ ನಡೆಯಲಿದೆ. ಅದನ್ನು ಯಾರೂ ತಡೆಯಲು ಸಾಧ್ಯವಿಲ್ಲ ಎಂದು ವಿಜಯೇಂದ್ರ ಹೇಳಿದರು. ಕಾಂಗ್ರೆಸ್ ಪಕ್ಷದ ಒಳಭೇದಗಳು ಬಿಜೆಪಿಗೆ ಲಾಭ ತರುತ್ತವೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ವಿಜಯೇಂದ್ರ, ಬಿಜೆಪಿ ತನ್ನದೇ ಆದ ಕಾರ್ಯಸೂಚಿಯನ್ನು ಜನರ ಮುಂದೆ ಇಡುವುದರ ಮೇಲೆ ಗಮನಹರಿಸಲಿದೆ ಎಂದರು.

ಸರ್ಕಾರ ವಿರೋಧಿ ಅಲೆ ಎಂಬುದು ಕೇವಲ ಬೋನಸ್ ಮಾತ್ರ. ಮುಖ್ಯವಾದುದು ನಾವು ರಾಜ್ಯದ ಜನರಿಗೆ ಏನು ನೀಡುತ್ತೇವೆ ಎಂಬುದಾಗಿದೆ ಎಂದು ಅವರು ಹೇಳಿದರು.

ಇತ್ತೀಚೆಗೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರ ಕರ್ನಾಟಕ ಭೇಟಿಯ ಬಗ್ಗೆ ಕೂಡ ವಿಜಯೇಂದ್ರ ಮಾತನಾಡಿದರು. ನಬೀನ್ ಅವರು ಬೆಂಗಳೂರಿನಲ್ಲಿ ಶಾಸಕರು, ಸಂಸದರು ಹಾಗೂ ಯುವ ಪ್ರತಿನಿಧಿಗಳೊಂದಿಗೆ ಕೋರ್ ಕಮಿಟಿ ಸಭೆ ನಡೆಸಿದರು. ಸಂಘಟನಾ ವಿಚಾರಗಳಲ್ಲಿ ನಿತಿನ್ ನಬಿನ್ ಅವರಿಗೆ ಅಪಾರ ಅನುಭವವಿದೆ. ಸಂಘಟನೆಯನ್ನು ಇನ್ನಷ್ಟು ಬಲಪಡಿಸುವ ದೃಢನಿಶ್ಚಯ ಮತ್ತು ಸಾಮರ್ಥ್ಯ ಅವರಿಗಿದೆ ಎಂದು ಹೇಳಿದರು.

## ನಾವು ಕಳವಳ ವ್ಯಕ್ತಪಡಿಸಿದೆವು, ಆದ್ರೆ ಸಿದ್ದರಾಮಯ್ಯ ಸೈಲೆಂಟ್ ಆಗಿದ್ದರು: ಸಚಿವ ಎಚ್.ಕೆ.ಪಾಟೀಲ್



ಬೆಂಗಳೂರು: ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಗೊಂದಲಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಹೈಕಮಾಂಡ್ ಕೊನೆಗೂ ತೆರೆ ಎಳೆದಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ರಾಜೀನಾಮೆ ನೀಡುವುದು ಬಹುತೇಕ ಖಚಿತವಾಗಿದೆ.

ಇನ್ನು ಮಾಧ್ಯಮಗಳಲ್ಲಿ ಸಿಎಂ ಸಿದ್ದರಾಮಯ್ಯ ಅವರ ರಾಜೀನಾಮೆ ಸುದ್ದಿ ಕೇಳಿ ಅವರ ಆಪ್ತ ಸಚಿವರು ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ರಾಜೀನಾಮೆ ವಿಚಾರವಾಗಿ ಕೇಳಿದರೆ ಸಿದ್ದರಾಮಯ್ಯ ಅವರು ಮೌನ ವಹಿಸಿದ್ದಾರೆ ಎಂದು ಸಚಿವ ಎಚ್.ಕೆ.ಪಾಟೀಲ್ ಅವರು ಬುಧವಾರ ಹೇಳಿದ್ದಾರೆ.

ಸಿಎಂ ಜೊತೆಗಿನ ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಎಚ್.ಡಿ.ಪಾಟೀಲ್ ಅವರು, ಮಾಧ್ಯಮಗಳಲ್ಲಿ ಸುದ್ದಿ ಬಂದಿದೆ ಎಂದು ನಾವು ನಮ್ಮ ಕಳವಳ ವ್ಯಕ್ತಪಡಿಸಿದ್ದೇವೆ. ಆದರೆ, ಸಿಎಂ ಸಿದ್ದರಾಮಯ್ಯ ಸೈಲೆಂಟ್ ಆಗಿದ್ದರು ಎಂದು ತಿಳಿಸಿದ್ದಾರೆ.

ನಿನ್ನೆ ದೆಹಲಿಯ ಇಂದಿರಾ ಭವನದಲ್ಲಿ ನಡೆದ ಹೈವೋಲ್ಟೇಜ್ ಸಭೆಯಲ್ಲಿ ರಾಹುಲ್ ಗಾಂಧಿ ಅವರು ಸಿಎಂ ಸಿದ್ದರಾಮಯ್ಯ ಅವರೊಂದಿಗೆ ಸುಮಾರು 45 ನಿಮಿಷಗಳ ಕಾಲ ಚರ್ಚಿಸಿದ್ದು, ಈ ವೇಳೆ ಅಧಿಕಾರ ಹಂಚಿಕೆ ಸೂತ್ರದಂತೆ ರಾಜೀನಾಮೆ ನೀಡುವಂತೆ ಸಿದ್ದರಾಮಯ್ಯ ಅವರಿಗೆ ಸೂಚನೆ ನೀಡಿದ್ದಾರೆ ಎನ್ನಲಾಗಿದೆ. ಇದರ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ಅವರು ಇಂದು ರಾಜ್ಯಪಾಲರ ಭೇಟಿಗೆ ಸಮಯ ಕೇಳಿದ್ದು, ರಾಜೀನಾಮೆ ನೀಡುವುದು ಬಹುತೇಕ ಖಚಿತವಾಗಿದೆ.

## ನಮ್ಮ ರಾಷ್ಟ್ರದ ಅಭಿವೃದ್ಧಿಯಾಗಬೇಕಾದರೆ ಯುವಕರ ಪಾತ್ರ ಪ್ರಮುಖವಾಗಿದೆ : ಲಕ್ಷ್ಮಣ ಅಡಿಹುಡಿ



**ಬೆಳಗಾವಿ ವಾರ್ತೆ ಮೂಡಲಗಿ :** ನಮ್ಮ ದೇಶ ಅಭಿವೃದ್ಧಿಯಾಗಬೇಕಾದರೆ ಯುವಕರ ಪಾತ್ರ ಪ್ರಮುಖವಾಗಿದೆ. ಯುವಕರು ದೇಶಾಭಿಮಾನ ಬೆಳೆಸಿಕೊಳ್ಳಬೇಕು ಎಂದು ಮೂಡಲಗಿ ಶ್ರೀ ಮಂಜುನಾಥ ಸೈನಿಕ ತರಬೇತಿ ಕೇಂದ್ರದ ಸಂಸ್ಥಾಪಕ ಲಕ್ಷ್ಮಣ ಅಡಿಹುಡಿ ಹೇಳಿದರು.

ಅವರು ಮೂಡಲಗಿ ನಗರದ ಶ್ರೀ ಮಂಜುನಾಥ ಸೈನಿಕ ತರಬೇತಿ ಕೇಂದ್ರದಲ್ಲಿ ಭಾರತ ಸರಕಾರ ಯುವ ಕಾರ್ಯ ಹಾಗೂ ಕ್ರೀಡಾ ಸಚಿವಾಲಯ ಮೈ ಭಾರತ ಕೇಂದ್ರ ಬೆಳಗಾವಿ, ಜೈ ಕರ್ನಾಟಕ ಅಂಗವಿಕಲರ ಗ್ರಾಮೀಣ ಅಭಿವೃದ್ಧಿ ಸಂಘ ಹಳ್ಳೂರ ಹಾಗೂ ಸಂಕಲ್ಪ ಕ್ರೀಡಾ ಮತ್ತು ಸಮಾಜ ಸೇವಾ ಸಂಘ ಮೂಡಲಗಿ ಇವುಗಳ ಸಂಯುಕ್ತಾಶ್ರಯದಲ್ಲಿ ವಿನಾಯಕ್ ದಾಮೋದರ್ ಸಾವರ್ಕರ್ ಜನ್ಮದಿನದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮ ಭಾಗದಲ್ಲಿ ಯುವ ಸಂಘಟನೆಗಳ ಮೂಲಕ ಬೆಳಗಾವಿ ಮೈ ಭಾರತ ಕೇಂದ್ರ ಮಾಡುವ ಸೇವೆ ಮತ್ತು ಕಾರ್ಯ ಶ್ಲಾಘನಿಯವಾಗಿದೆ ಎಂದು ಹೇಳಿದರು.

ಯುವ ಸಂಘಗಳ ಒಕ್ಕೂಟದ ಬೆಳಗಾವಿ ಜಿಲ್ಲಾಧ್ಯಕ್ಷ ಸಿದ್ದಣ್ಣ ದುರದುಂಡಿ ಮಾತನಾಡಿ ನಮ್ಮ ಗ್ರಾಮೀಣ ಭಾಗದ ಯುವ ಜನತೆ ಮುಖ್ಯವಾಹಿನಿಗೆ ಬರಬೇಕಾದರೆ ಪ್ರತಿಯೊಂದು ಸಂಘಟನೆ ಗ್ರಾಮೀಣ ಭಾಗದಲ್ಲಿ ಯುವ ಜನರಿಗೆ ಜಾಗೃತಿ ಮೂಡಿಸಬೇಕು. ಮೈ ಭಾರತ ಕೇಂದ್ರ ಬೆಳಗಾವಿ ಇವರು ಹಲವಾರು ಕಾರ್ಯಕ್ರಮಗಳನ್ನು ರೂಪಿಸುತ್ತಿದ್ದಾರೆ ಜಿಲ್ಲೆಯ ಯುವ ಜನತೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಸಂಕಲ್ಪ ಕ್ರೀಡಾ ಮತ್ತು ಸಮಾಜ ಸೇವಾ ಸಂಘದ ಅಧ್ಯಕ್ಷ ಸುಭಾಷ್ ಗೊಡ್ಯಾಗೋಳ ಮಾತನಾಡಿ ಡಿಜಿಟಲ್ ಯುಗದಲ್ಲಿ ಪ್ರತಿಯೊಂದು ಯುವಕ ಸಂಘಗಳನ್ನು ಆನ್ಲೈನ್ ಮೂಲಕ ನೊಂದಣಿ ಮಾಡಿಕೊಳ್ಳಬೇಕು. ರಾಷ್ಟ್ರದ ಅಭಿವೃದ್ಧಿಗಾಗಿ ಯುವಕರು ಪಣತೊಡಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಪೈಲ್ವಾನ್ ಮಾರುತಿ ಸಿಂಧೆ, ಮಲ್ಲಮ್ಮ ಹಗೆದ, ಹಣಮಂತ ಅಂಗಡಿ, ಉತ್ತಮಗೌಡ, ಮಹೇಶ ಹೊಸಮನಿ, ಹಾಲಪ್ಪ ಗಿಡ್ಡವಗೋಳ ಹಾಗೂ ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

ದೈಹಿಕ ಶಿಕ್ಷಣ ಶಿಕ್ಷಕ ರವಿ ಕರಿಗಾರ ನಿರೂಪಿಸಿ ವಂದಿಸಿದರು.

## ಕಳೆದಕೊಂಡ 15 ಮೊಬೈಲ್ ಪತ್ತೆ



**ಬೆಳಗಾವಿ ವಾರ್ತೆ ಮೂಡಲಗಿ :** ಪಟ್ಟಣದಲ್ಲಿ ವಿವಿಧ ಕಡೆಗಳಲ್ಲಿ ಕಳೆದುಹೋಗಿದ್ದ ಮತ್ತು ಕಳ್ಳತನವಾಗಿದ ಸುಮಾರು 15 ಮೊಬೈಲ್ ಗಳನ್ನು ಪೋರ್ಟ ಲ್ ಅಡಿ ಪತ್ತೆ ಮಾಡಿದ ಮೊಬೈಲ್ ವಾರಸುದಾರರಿಗೆ ಹಸ್ತಾಂತರಿಸಲಾಗುವುದು ಎಂದು ಪಟ್ಟಣದ ಸಿಪಿಐ ಶ್ರೀಶೈಲ್ ಬ್ಯಾಕೂಡ್ ಹೇಳಿದರು

ಅವರು ಮಂಗಳವಾರದಂದು ಪಟ್ಟಣ ಪೊಲೀಸ್ಸ ವೃತ್ತ ನೀರಿಕ್ಷಕರ ಕಚೇರಿಯಲ್ಲಿ ಈ ಹಿಂದೆ ಕಳೆದುಹೋಗಿದ್ದ ಮತ್ತು ಕಳ್ಳತನವಾಗಿ ಪ್ರಕರಣ ದಾಖಲಾದ ಸುಮಾರು 15 ಮೊಬೈಲ್ ಗಳನ್ನು ಪೋರ್ಟ ಲ್ ಅಡಿ ಪತ್ತೆಯಾದ ಮೊಬೈಲ್ ಮಾಲೀಕರಿಗೆ ವಿತರಿಸಿ ಮಾತನಾಡಿ, ಮೊಬೈಲ್ ಬಳಕೆದಾರರು ತಮ್ಮ ಮೊಬೈಲ್ ಕಳೆಯುವುದು ಮತ್ತು ಕಳ್ಳತನವಾಗದಂತೆ ಮುಂಜಾಗ್ರತ ಕ್ರಮವಹಿಸಬೇಕು ಹಾಗೂ ಮೊಬೈಲ್ ಖರೀದಿಸಿದ ಸಮಯದಲ್ಲಿನ ಕಾಗದ ಪತ್ರಗಳನ್ನು ಕಾಯ್ದಿರೀಸಿಕೊಂಡರೆ ಮೊಬೈಲ್ ಕಳೆದ ಮತ್ತು ಕಳ್ಳತನವಾದ ಸಮಯ ಮರಳಿ ಪಡೆಯಲ್ಲು ಸಹಕಾರಿಯಾಗುತ್ತದೆ ಎಂದರು

ಪಿಎಸ್ಐ ರಾಜು ಪೂಜೇರಿ, ಪ್ರೊಬೇಶನರಿ ಪಿಎಸ್ ಐ ರಾಜು ಪಿ. ಪೂಜಾರ, ಸಿಬ್ಬಂದಿಗಳಾದ ಎಸ್ ಜಿ ಮಣ್ಣಾಪೂರ, ಎಲ್ ಎಸ್ ಜೊಕ್ಕಾನಟ್ಟಿ, ಕೆ ಸಿ ಬಾಗಲಿ ಹಾಗೂ ಲಕ್ಷ್ಮಣ ಗುಡೇರ ಉಪಸ್ಥಿತರಿದ್ದರು.

## ಅಥಣಿಯಲ್ಲಿ ಶ್ರದ್ಧಾ-ಭಕ್ತಿಯಿಂದ ಜರುಗಿದ ಶ್ರೀ ಕೇರಿ ಲಕ್ಕವ್ವ ದೇವಿಯ ಜಾತ್ರಾ ಮಹೋತ್ಸವ

**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನ ವಿಜಯಪುರ ರಸ್ತೆಯಲ್ಲಿ ನೆಲೆಸಿರುವ ಶ್ರೀ ಕೇರಿ ಲಕ್ಕವ್ವ ದೇವಿಯ ಜಾತ್ರಾ ಮಹೋತ್ಸವವು, ಭಕ್ತರ ಅಪಾರ ಸಮ್ಮುಖದಲ್ಲಿ ಅತ್ಯಂತ ಸಡಗರ ಮತ್ತು ಭಕ್ತಿ ಭಾವದಿಂದ ಸಂಪನ್ನಗೊಂಡಿತು.

ಜಾತ್ರೆಯ ಅಂಗವಾಗಿ ದೇವಾಲಯದ ಆವರಣದಲ್ಲಿ ದೇವರಿಗೆ ವಿಶೇಷ ಪೂಜಾ ಕಾರ್ಯಕರ್ಮಗಳನ್ನು ನೆರವೇರಿಸಲಾಯಿತು. ಉತ್ಸವದ ಪ್ರಮುಖ ಆಕರ್ಷಣೆಯಾಗಿ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮವು ವೈಭವದಿಂದ ಜರುಗಿತು. ಸಾವಿರಾರು ಸಂಖ್ಯೆಯಲ್ಲಿ ಆಗಮಿಸಿದ ಭಕ್ತರು ದೇವಿಯ ದರ್ಶನ ಪಡೆದು ಪುನೀತರಾದರು.

ಈ ವೇಳೆ ಭಕ್ತಾದಿಗಳನ್ನು ಉದ್ದೇಶಿಸಿ ಮಾತನಾಡಿದ ಹಿರಿಯ ಮುಖಂಡ ಶಿವಾನಂದ ದಿವಾನಮಳ ಅವರು, ಈ ಕಲ್ಯಾಣ ಮಂಟಪವು ಭಕ್ತರ ದೇಣಿಗೆಯಿಂದ ಪೂರ್ಣಗೊಂಡಿರುವುದು ನಮಗೆಲ್ಲರಿಗೂ ಹೆಮ್ಮೆಯ ವಿಷಯ. ದೇವಸ್ಥಾನದ ಆವರಣದಲ್ಲಿ ಕೈಗೊಳ್ಳಬೇಕಾದ ಮುಂದಿನ ಕಟ್ಟಡ ಕಾಮಗಾರಿಗಳಿಗಾಗಿ ಶಾಸಕ ಲಕ್ಷ್ಮಣ ಸವದಿ ಅವರು ಈಗಾಗಲೇ 30 ಲಕ್ಷ ರೂಪಾಯಿ ಅನುದಾನ ಬಿಡುಗಡೆ ಮಾಡಿದ್ದಾರೆ. ಶೀಘ್ರವೇ ಕೊಠಡಿಗಳ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಾಗುವುದು," ಎಂದರು.

ಮುಂದುವರೆದು ಮಾತನಾಡುತ್ತಾ, ಕಲ್ಯಾಣ ಮಂಟಪವನ್ನು ಬಡವರಿಗೆ ಅನುಕೂಲವಾಗುವ ದೃಷ್ಟಿಯಿಂದ ನಿರ್ಮಿಸಲಾಗಿದ್ದು, ಕಾರ್ಯಕ್ರಮಗಳಿಗೆ ಈ ಕೆಳಗಿನಂತೆ ದರ ನಿಗದಿಪಡಿಸಲಾಗಿದೆ ಎಂದು ತಿಳಿಸಿದರು: ಮದುವೆ ಸಮಾರಂಭ 21,000, ಕುಬುಸ ಕಾರ್ಯ 15,000, ಹುಟ್ಟುಹಬ್ಬ ಉಪನಯನ 11,000,ರೂ ಗಳಿದ್ದು

ತಾಲೂಕಿನ ಜನತೆ ಕಲ್ಯಾಣ ಮಂಟಪದ ಈ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ಅವರು ಕೋರಿದರು.

ಈ ಜಾತ್ರಾ ಮಹೋತ್ಸವದಲ್ಲಿ ಪ. ಪೂ.ಶ್ರೀ ಮರುಳಸಿದ್ಧ ಮಹಾಸ್ವಾಮೀಜಿ,ಗಿರೀಶ ದಿವಾನಮಳ, ಶಿವು ಬಳ್ಳೊಳಿ, ಬಸಪ್ಪಾ ಬಕಾರಿ, ಬಾಬು ಜೋಗಾಣಿ, ಶಿವಪ್ಪಾ ರೊಕಡಿ,



ಚಿದಾನಂದ ಹಳದಮಳ ,ಮಹಾದೇವ ಹಳದಮಳ, ಶ್ರೀಶೈಲ ಹಳದಮಳ, ಕೇದಾರಿ ಹಳದಮಳ,ನಿತ್ಯಾನಂದ ಚರಂತಿಮಠ, ಸುಭಾಸ ಕಾಗಲೆ, ಭೀಮು ದಿವಾನಮಳ, ಬಸಪ್ಪ ಮೈಗೂರ ಯೂಥ್ ಆಫ್ ಶಿವಯೋಗಿ ನಗರ ಸೇವಾ ಸಂಘ ಸರ್ವ ಸದಸ್ಯರು ಸೇರಿದಂತೆ ತಾಲೂಕಿನ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವಿಯ ಕೃಪೆಗೆ ಪಾತ್ರರಾದರು.

## ಬೆಳಗಾವಿಗೆ ನೀಲಣ್ಣವರ ಕರೆತಂದ ಸಿಐಡಿ

**ಬೆಳಗಾವಿ ವಾರ್ತೆ ಬೆಳಗಾವಿ:** ಬಹುಕೋಟಿ ಕೋಟಿ ವಂಚನೆ ಆರೋಪದ ಪ್ರಕರಣದಲ್ಲಿ ಸಂಸ್ಥೆಯ ಮುಖ್ಯಸ್ಥ ಶಿವಾನಂದ ನೀಲಣ್ಣವರ ಅವರನ್ನು ಸಿಐಡಿ ಅಧಿಕಾರಿಗಳು ಸೋಮವಾರ ತಡರಾತ್ರಿ ಬೆಂಗಳೂರಿನಿಂದ ಬೆಳಗಾವಿಗೆ ಕರೆತಂದು ಮಾಳಮಾರುತಿ ಪೊಲೀಸ್ ಠಾಣೆಯಲ್ಲಿ ವಿಚಾರಣೆ ನಡೆಸಿದರು.

ನ್ಯಾಯಾಲಯ ನೀಡಿದ್ದ 10 ದಿನಗಳ ಸಿಐಡಿ ಕಸ್ಟಡಿ ಅವಧಿ ಮೇ 27ರಂದು ಅಂತ್ಯಗೊಳ್ಳಲಿದೆ. ಆದರೆ, ನಾಳೆ ನ್ಯಾಯಾಲಯಕ್ಕೆ ರಜೆ ಇರುವ ಹಿನ್ನೆಲೆಯಲ್ಲಿ ನೀಲಣ್ಣವರ ಅವರನ್ನು ಒಂದು ದಿನ ಮುಂಚಿತವಾಗಿಯೇ ನ್ಯಾಯಾಧೀಶರ ಮುಂದೆ ಹಾಜರುಪಡಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಮೂವರಿಗೆ ಸಿಐಡಿ ನೋಟಿಸ್, ಠಾಣೆಗೆ ಹಾಜರು: ಪ್ರಕರಣಕ್ಕೆ ಸಂಬಂಧಿಸಿದಂತೆ ನೀಲಣ್ಣವರ ಪತ್ನಿ, ನಟ ಆರ್. ಅಭಿಲಾಷ್ ಹಾಗೂ ವ್ಯವಹಾರ ಪಾಲುದಾರ ಸುಭಾಷ್ ಅವರಿಗೆ ಸಿಐಡಿ ನೋಟಿಸ್ ಜಾರಿ ಮಾಡಿತ್ತು. ತನಿಖೆಗೆ ಹಾಜರಾಗುವಂತೆ ಸೂಚನೆ ನೀಡಿದ್ದ ಹಿನ್ನೆಲೆಯಲ್ಲಿ ಮೂವರೂ ಮಂಗಳವಾರ ಮಾಳಮಾರುತಿ ಠಾಣೆಗೆ ಬಂದು ಸಿಐಡಿ ಅಧಿಕಾರಿಗಳ ಮುಂದೆ ಹಾಜರಾಗಿದ್ದಾರೆ.

ಈ ಮೂವರಿಂದಲೂ ಹಣಕಾಸು ವ್ಯವಹಾರಗಳು, ಸಂಸ್ಥೆಯ ಒಳಚಟುವಟಿಕೆಗಳು, ಹೂಡಿಕೆದಾರರ ಹಣದ ಹರಿವು ಹಾಗೂ ಆಸ್ತಿ ಖರೀದಿ ಕುರಿತಂತೆ ಮಹತ್ವದ ಮಾಹಿತಿ ಸಂಗ್ರಹಿಸಲಾಗುತ್ತಿದೆ ಎನ್ನಲಾಗಿದೆ.

ತನಿಖೆಯನ್ನು ಮತ್ತಷ್ಟು ಬಿಗಿಗೊಳಿಸಿರುವ ಸಿಐಡಿ, ಹೂಡಿಕೆದಾರರ ಹಣದಿಂದ ಖರೀದಿಸಲಾಗಿದೆ ಎನ್ನಲಾದ ಐಷಾರಾಮಿ ವಾಹನಗಳ ಜಪ್ತಿಗೂ ಮುಂದಾಗಿದೆ. ಕೋಟ್ಯಂತರ ರೂಪಾಯಿ ಮೌಲ್ಯದ ಡಿಫೆಂಡರ್, ಮರ್ಸಿಡಿಸ್ ಬೆಂಝ್ ಹಾಗೂ ವೆಲ್‌ಫೈರ್ ಕಾರುಗಳನ್ನು ವಶಪಡಿಸಿಕೊಳ್ಳುವ ಪ್ರಕ್ರಿಯೆ ಆರಂಭಿಸಲಾಗಿದೆ ಎಂದು ತನಿಖಾ ಮೂಲಗಳು ತಿಳಿಸಿವೆ.

# ಮುದ್ದೇಬಿಹಾಳ ರೈತ ಸಂಪರ್ಕ ಕೇಂದ್ರದಿಂದ ವಿಶೇಷ ಅಭಿಯಾನ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಮುದ್ದೇಬಿಹಾಳ ರೈತ ಸಂಪರ್ಕ ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಾದ ಕಾಳಗಿ, ಮುದೂರ ಹಾಗೂ ಹಡಲಗೇರಿ ಗ್ರಾಮಗಳಲ್ಲಿ ಸೋಮವಾರ ಕೃಷಿ ಇಲಾಖೆ ವತಿಯಿಂದ '2026-27ನೇ ಸಾಲಿನ ದ್ವಿದಳ ಧಾನ್ಯಗಳ ಆತ್ಮ ನಿರ್ಭರತೆ ಅಭಿಯಾನ ಯೋಜನೆ' ಅಡಿ ಮುಂಗಾರು ಹಂಗಾಮು ಆಂದೋಲನ ಹಾಗೂ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.




ಕಾರ್ಯಕ್ರಮದಲ್ಲಿ ಕೃಷಿ ಇಲಾಖೆ ಅಧಿಕಾರಿ ಸೋಮನಗೌಡ ಬಿರಾದಾರ ಅವರು ರೈತರಿಗೆ ತೊಗರಿ ಬೆಳೆಯ ಬೀಜೋಪಚಾರದ ಕುರಿತು ಪ್ರಾಯೋಗಿಕವಾಗಿ ಪ್ರಾತ್ಯಕ್ಷಿಕೆ ನಡೆಸಿ ಕೊಟ್ಟು, ರೈತರು ಬಿತ್ತನೆ ಪೂರ್ವದಲ್ಲಿ ಕಡ್ಡಾಯವಾಗಿ ಬೀಜೋಪಚಾರ ಮಾಡಬೇಕು ಎಂದು ಕರೆ ನೀಡಿದರು.

**ಇಳುವರಿ ಹೆಚ್ಚಳಕ್ಕೆ ಕುಡಿ ಚಿವುಟಲು ಸಲಹೆ:** ನಂತರ ರೈತರನ್ನುದ್ದೇಶಿಸಿ ಮಾತನಾಡಿದ ಅವರು,ಕಪ್ಪು ಮಣ್ಣು ಹಾಗೂ ನೀರಾವರಿ ಸೌಲಭ್ಯವಿರುವ ರೈತರು ಅಗಲ ಸಾಲು ಪದ್ಧತಿಯಲ್ಲಿ ಬಿತ್ತನೆ ಕೈಗೊಳ್ಳಬೇಕು. ಇದರೊಂದಿಗೆ ಹೆಸರು, ಉದ್ದು, ಸಜ್ಜೆ, ಶೇಂಗಾ ಹಾಗೂ ಸೂರ್ಯಕಾಂತಿ ಬೆಳೆಗಳೊಂದಿಗೆ ಸಂಯೋಜಿಸಿ ಅಂತರ ಬೇಸಾಯ ಪದ್ಧತಿಯನ್ನು ಅನುಸರಿಸಬೇಕು. ತೊಗರಿ ಬೆಳೆಯು 45 ರಿಂದ 50 ದಿನಗಳ ಅವಧಿಯದ್ದಾಗಿದ್ದಾಗ ಕಡ್ಡಾಯವಾಗಿ ಕುಡಿ ಚಿವುಟುವ ಕಾರ್ಯ ಮಾಡಬೇಕು. ಇದರಿಂದ ಶೇಕಡಾ 10 ರಿಂದ 15 ರಷ್ಟು ಇಳುವರಿ ಹೆಚ್ಚಿಸಲು ಸಾಧ್ಯವಿದೆ" ಎಂದರು.

**ರೋಗ ನಿಯಂತ್ರಣ ಹಾಗೂ ಪೋಷಕಾಂಶಗಳ ಬಳಕೆ:** "ರೈತರು ಕಡ್ಡಾಯವಾಗಿ ಮಣ್ಣು ಪರೀಕ್ಷೆ ಆಧಾರದ ಮೇಲೆಯೇ ಸಮತೋಲನ ರಸಗೊಬ್ಬರ ಪೂರೈಸಬೇಕು. ಇದರೊಂದಿಗೆ ನ್ಯಾನೋ ರಸಗೊಬ್ಬರ, ಲಘು ಪೋಷಕಾಂಶ ಹಾಗೂ 'ಪಲ್ಸ್ ಮ್ಯಾಜಿಕ್' ಬಳಸುವುದರಿಂದ ಉತ್ತಮ ಇಳುವರಿ ಪಡೆಯಬಹುದು. ಸಕಾಲದಲ್ಲಿ ಸಸ್ಯ ಸಂರಕ್ಷಣಾ ಕ್ರಮಗಳನ್ನು ಕೈಗೊಳ್ಳುವುದರಿಂದ ತೊಗರಿ ಬೆಳೆಗೆ ಬಾಧಿಸುವ ಗೊಡ್ಡು ರೋಗ ಹಾಗೂ ನೆಟೆ ರೋಗಗಳನ್ನು ಸಂಪೂರ್ಣವಾಗಿ ನಿಯಂತ್ರಿಸಬಹುದು. ಹತ್ತಿ ಬೆಳೆಯಲ್ಲಿ ಸುತ್ತಲೂ ತೊಗರಿಯನ್ನು ಕಾವಲು ಬೆಳೆಯಾಗಿ ಬೆಳೆಯುವುದರಿಂದ ಮುಖ್ಯ ಬೆಳೆಗೆ ಬರುವ ಕೀಟಬಾಧೆಯನ್ನು ತಡೆಯುವುದರ ಜೊತೆಗೆ ಹೆಚ್ಚುವರಿ ತೊಗರಿ ಇಳುವರಿಯನ್ನು ಪಡೆಯಬಹುದು ಎಂದು ಸವಿಸ್ತಾರವಾಗಿ ಮಾಹಿತಿ ನೀಡಿದರು.

**ತೊಗರಿ ಬೆಳೆಯಲ್ಲಿ ಬೀಜೋಪಚಾರ ವಿಧಾನ:** ಬಿತ್ತನೆಗೆ ಮುಂಚಿತವಾಗಿ ಬೀಜಗಳಲ್ಲಿ ಬರ ನಿರೋಧಕ ಶಕ್ತಿಯನ್ನು ಹೆಚ್ಚಿಸಲು, ಬೀಜಗಳನ್ನು ಶೇಕಡಾ 2 ರಷ್ಟು ಕ್ಯಾಲ್ಸಿಯಂ ಕ್ಲೋರೈಡ್ ದ್ರಾವಣದಲ್ಲಿ 30 ನಿಮಿಷಗಳ ಕಾಲ ನೆನೆಸಬೇಕು. ತದನಂತರ ಅದನ್ನು ತೆಗೆದು ನೆರಳಿನಲ್ಲಿ ಕನಿಷ್ಠ 7 ಗಂಟೆಗಳ ಕಾಲ ಒಣಗಿಸಬೇಕು. ನಂತರ ಒಣಗಿದ ಪ್ರತಿ ಒಂದು ಕೆಜಿ ಬಿತ್ತನೆ ಬೀಜಕ್ಕೆ 3 ಗ್ರಾಂ ಶಿಲೀಂಧ್ರನಾಶಕ ಮಿಶ್ರಣವಾದ 'ಕಾರ್ಬೆಂಡೈಜಿಮ್ ಶೇ.12 + ಮ್ಯಾಂಕೋಜೆಬ್ ಶೇ.64' ಅಥವಾ 10 ಗ್ರಾಂ ಜೈವಿಕ ಗೊಬ್ಬರಗಳಾದ 'ಟ್ರೈಕೋಡರ್ಮಾ' ಹಾಗೂ 'ರೈಜೋಬಿಯಂ' ಸಂಯುಕ್ತಗಳನ್ನು ಬಳಸಿ ಬೀಜೋಪಚಾರ ಮಾಡಬೇಕು. ಹೀಗೆ ಉಪಚರಿಸಿದ ಬೀಜಗಳನ್ನು ಮತ್ತೊಮ್ಮೆ 7 ಗಂಟೆಗಳ ಕಾಲ ಕಡ್ಡಾಯವಾಗಿ ನೆರಳಿನಲ್ಲೇ ಒಣಗಿಸಿ, ನಂತರ ಬಿತ್ತನೆಗೆ ಬಳಸಬೇಕು ಎಂದು ಕೃಷಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ತರಬೇತಿ ಹಾಗೂ ಆಂದೋಲನ ಕಾರ್ಯಕ್ರಮಗಳಲ್ಲಿ ಆಯಾ ಗ್ರಾಮಗಳ ನೂರಾರು ಪ್ರಗತಿಪರ ರೈತರು, ಕೃಷಿ ಇಲಾಖೆಯ ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ದಿನಗೂಲಿ ಕಾರ್ಮಿಕರನ್ನಾಗಿ ಕೆಲಸವನ್ನು ನೀಡುವಂತೆ ಆಗ್ರಹ

**ಬೆಳಗಾವಿ ವಾರ್ತೆ ವಿಜಯಪುರ :** ಅಖಿಲ ಕರ್ನಾಟಕ ಬೆಳೆ ಸಮೀಕ್ಷೆದಾರರ ಸಂಘಟನೆಯ ತಿಕೋಟಾ ತಾಲೂಕಾ ಘಟಕದ ಪದಾಧಿಕಾರಿಗಳೆಲ್ಲರೂ ಸೇರಿ 25/05/2026 ರ ಸೋಮವಾರ ದಿನ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ತಿಕೋಟಾ ತಾಲೂಕಿನ ತಹಶೀಲ್ದಾರ್ ಇವರ ಮುಖಾಂತರ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಇವರಿಗೆ ಮನವಿ ಸಲ್ಲಿಸಿ ಮಾತನಾಡುತ್ತಾ ಸರಿ ಸುಮಾರು 8–10 ವರ್ಷಗಳಿಂದ ತಿಕೋಟಾ ತಾಲೂಕಿನಲ್ಲಿ 56 ಜನ ಬೆಳೆ ಸಮೀಕ್ಷೆದಾರರಾಗಿ ಕೆಲಸ ಮಾಡುತ್ತಾ ಬಂದಿರುವ ನಮಗೆ ಹಂಗಾಮುವಾರು ನಮ್ಮನ್ನು ಕೆಲಸಕ್ಕೆ ನೇಮಕ ಮಾಡಿಕೊಳ್ಳದೇನೆ ಕನಿಷ್ಠ ವೇತನದ ನೀತಿ ಅಡಿಯಲ್ಲಿ ದಿನಗೂಲಿ ಕಾರ್ಮಿಕರನ್ನಾಗಿ ನೇಮಿಸಿ ಕೊಂಡು ವರ್ಷದ 12 ತಿಂಗಳುಗಳ ಕಾಲ ಕೆಲಸವನ್ನು ನೀಡುವಂತೆ ಆಗ್ರಹಿಸಲಾಯಿತು.

ಈ ವೇಳೆ ತಾಲೂಕಾ ಅಧ್ಯಕ್ಷರಾದ ಭಾಗೇಶ ಮಲಕಪ್ಪ ರಾಮತೀರ್ಥ ಅವರು ಮನವಿ ಪತ್ರವನ್ನು ಸಲ್ಲಿಸಿದರು. ಈ ಒಂದು ಕಾರ್ಯಕ್ರಮಕ್ಕೆ ವಿಶೇಷ ಅತಿಥಿಯಾಗಿ ಆಗಮಿಸಿದ ಸಂಘಟನೆಯ ರಾಜ್ಯ ಅಧ್ಯಕ್ಷರಾದ ಭೀಮಪ್ಪ ಲಕ್ಷ್ಮಣ ತಳವಾರ ಅವರು ಕೃಷಿ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳ ಜೊತೆ ಮಾತನಾಡಿ ಮಹಾ ಸ್ವಾಮಿ ಕರ್ನಾಟಕ ರಾಜ್ಯದಲ್ಲಿ ಬೆಳೆ ಸಮೀಕ್ಷೆದಾರರಾದ ನಾವು 23,720 ಜನ ಕೆಲಸಗಾರರು ಕಾರ್ಯ ನಿರ್ವಹಿಸುತ್ತಿದ್ದೇವೆ. ನಮ್ಮ ಕೆಲಸಕ್ಕೆ ಸರ್ಕಾರ ನೀಡುವ ಸಂಬಳ ಯಾವ ವಿಧದಲ್ಲೂ ಸರಿಯಾದುದಲ್ಲ, ಯಾಕೆಂದರೆ ದರ ಪರಿಷ್ಕರಣೆ



ಅನ್ನೋದು ಎಲ್ಲದರಲ್ಲೂ ಮಾಡಿರುವಿರಿ , ಆದರೆ ನಮಗೇಕೆ ಮಲತಾಯಿ ಧೋರಣೆ ಮಾಡುತ್ತಿರುವಿರಿ ಎಂದು ಮಾತನಾಡಿದರು. ಮನವಿಯನ್ನು ಸ್ವೀಕರಿಸಿದ ಕೃಷಿ ಅಧಿಕಾರಿಗಳು ಈ ಒಂದು ಪ್ರಶ್ನೆಗೆ ಹೌದು ನೀವು ಪಡುತ್ತಿರುವ ಕಷ್ಟ ಕಾರ್ಪಣ್ಯಗಳ ಬಗ್ಗೆ ನಮಗೂ ಕೂಡಾ ಕನಿಕರವಿದೆ, ನೀವುಗಳು ರೈತರ ಮತ್ತು ಸರ್ಕಾರದ ಮಧ್ಯೆ ಕೊಂಡಿಗಳಾಗಿ ಕೆಲಸ ಮಾಡುತ್ತಿರುವಿರಿ, ನಿಮ್ಮ ಮನವಿಯನ್ನು ನಾವು ಮುಂದೆ ಕಳಿಸುತ್ತೇವೆ ಎಂದು ಧನಾತ್ಮಕವಾಗಿ ಸಹಕರಿಸಿದರು.

ಈ ಸಂದರ್ಭದಲ್ಲಿ ಅರುಣಕುಮಾರ ತಳವಾರ, ಬಂದೇ ನವಾಜ್ ಮುಲ್ಲಾ, ಚಂದನ ಕೋಳಿ, ನಾಗರಾಜ್ ಕೋರೆ, ಶಬ್ಬೀರ್ ಅತ್ತಾರ ಮತ್ತಿತರರು ಇದ್ದರು.

# ಡೆಂಗೀ ಹಾಗೂ ಇತರೆ ಕೀಟಜನ್ಯ ರೋಗಗಳು ಬಾರದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಿ: ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್

**ಬೆಳಗಾವಿ ವಾರ್ತೆ ಗದಗ:** ಜಿಲ್ಲೆಯಲ್ಲಿ ಡೆಂಗೀ ಹಾಗೂ ಇತರೆ ಕೀಟಜನ್ಯ ರೋಗಗಳು ಹರಡದಂತೆ ಮುಂಜಾಗ್ರತಾ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಮಂಗಳವಾರ ರಾಷ್ಟ್ರೀಯ ಡೆಂಗೀ ದಿನ ಮತ್ತು ಜಿಲ್ಲಾ ಮಟ್ಟದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಮಲೇರಿಯಾ, ಡೆಂಗ್ಯೂ, ಚಿಕ್ಕುನ್ ಗುನ್ಯಾ ರೋಗಗಳು ಹರಡದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯವರು ವಿವಿಧ ಇಲಾಖೆಯ ಸಮನ್ವಯತೆಯೊಂದಿಗೆ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಚತೆಯ ಕುರಿತು ಅರಿವು ಮೂಡಿಸಬೇಕು ಎಂದರು.

ಸಾರ್ವಜನಿಕ ನಲ್ಲಿಗಳು ಹಾಗೂ ಕೊಳವೆ ಬಾವಿಗಳಿರುವ ಪ್ರದೇಶಗಳಲ್ಲಿ ನೀರು ಸರಾಗವಾಗಿ ಹರಿದು ಹೋಗುವಂತೆ ಸೂಕ್ತ ವ್ಯವಸ್ಥೆ ಮಾಡಿರುವ ಕುರಿತು ಪರಿಶೀಲನೆ ನಡೆಸಬೇಕು. ಸೊಳ್ಳೆ ನಾಶಕ ದ್ರಾವಣವನ್ನು ಸೊಳ್ಳೆ ಉತ್ಪತ್ತಿಯಾಗುತ್ತಿರುವ ಸ್ಥಳದಲ್ಲಿ ಸಿಂಪಡಿಸಲು ಕ್ರಮ ಕೈಗೊಳ್ಳಬೇಕು. ಶಾಲೆಗಳಲ್ಲಿ ಆರೋಗ್ಯ ಶಿಕ್ಷಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಬಸ್ ಡಿಪೋಗಳಲ್ಲಿ ಖಾಲಿ ಟಾಯರ್ ಗಳಲ್ಲಿ ಹಾಗೂ ಘನ ತ್ಯಾಜ್ಯಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಖಾಲಿ ಟಾಯರ್ ಮೇಲೆ ಟಾರ್ಪಾಲನ್ನು ಹಾಕಿ ತಕ್ಷಣ ವಿಲೇವಾರಿಗೆ ಕ್ರಮ ವಹಿಸಬೇಕು. ಸಾಂಕ್ರಾಮಿಕ ರೋಗಗಳ ನಿಯಂತ್ರಣ ಹಾಗೂ ಸ್ವಚ್ಛತೆಯ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕೆಂದು ಜಿಲ್ಲಾಧಿಕಾರಿ



ಸಿ.ಎನ್.ಶ್ರೀಧರ್ ತಿಳಿಸಿದರು.

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ ಅವರು ಮಾತನಾಡಿ ಜಿಲ್ಲೆಯಲ್ಲಿ ಮಲೇರಿಯಾ ಪ್ರಕರಣಗಳಿಗೆ ಸಂಬಂಧಿಸಿದಂತೆ 2026 ಜನೆವರಿಯಿಂದ ಏಪ್ರಿಲ್ ವರೆಗೆ 120029 ರಕ್ತ ಲೇಪನ ಪರೀಕ್ಷೆಗಳನ್ನು ಕೈಗೊಳ್ಳಲಾಗಿದ್ದು 2 ಮಲೇರಿಯಾ ಪ್ರಕರಣಗಳು ಖಚಿತಪಟ್ಟಿವೆ. ಡೆಂಗೀ ಪ್ರಕರಣಗಳಿಗೆ ಸಂಬಂಧಿಸಿದಂತೆ 2026 ಜನೆವರಿಯಿಂದ ಏಪ್ರಿಲ್‌ವರೆಗೆ 607 ರಕ್ತದ ಮಾದರಿಗಳನ್ನು ಪರೀಕ್ಷಿಸಲಾಗಿದ್ದು 17 ಡೆಂಗೀ ಪ್ರಕರಣಗಳು ಖಚಿತಪಟ್ಟಿವೆ. ಚಿಕೂನ್ ಗುನ್ಯಾ ಪ್ರಕರಣಗಳಿಗೆ ಸಂಬಂಧಿಸಿದಂತೆ 2026 ಜನೆವರೆಯಿಂದ ಏಪ್ರಿಲ್‌ವರೆಗೆ 109 ರಕ್ತದ ಮಾದರಿ ಪರೀಕ್ಷಿಸಲಾಗಿದ್ದು 7 ಚಿಕೂನ್ ಗುನ್ಯಾ ಪ್ರಕರಣಗಳು ಖಚಿಪಟ್ಟಿವೆ ಎಂದರು.

ಶಾಲಾ ಮಕ್ಕಳಿಗೆ ಡೆಂಗೀ ಹಾಗೂ ಕೀಟಜನ್ಯ ರೋಗಗಳ ನಿಯಂತ್ರಣ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಕೈಗೊಳ್ಳಲಾಗಿದೆ. ನಗರ ಹಾಗೂ ಗ್ರಾಮೀಣ ಪ್ರದೇಶಗಳಿಗೆ ತೆರಳಿ ಅಲ್ಲಿನ ಜನರಿಗೆ ಕೀಟಜನ್ಯ ರೋಗಗಳು ಬಾರದಂತೆ ಮುಂಜಾಗ್ರತೆ ವಹಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ತಿಳುವಳಿಕೆ ನೀಡಲಾಗಿದೆ. ಮನೆಗಳ ಮುಂದೆ ನೀರು ನಿಲ್ಲದಂತೆ ನೋಡಿಕೊಳ್ಳುವಂತೆ ಹಾಗೂ ಸ್ವಚ್ಛತೆಯ ಕುರಿತು ಅರಿವು ಮೂಡಿಸಲಾಗಿದೆ. ಕಸ ವಿಲೇವಾರಿ ವಾಹನದ ಮೂಲಕವೂ ಕೀಟಜನ್ಯ ರೋಗಗಳ ನಿಯಂತ್ರಣಕ್ಕಾಗಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ ಎಂದು ಡಾ.ವೆಂಕಟೇಶ ರಾಠೋಡ ಸಭೆಗೆ ವಿವರಿಸಿದರು.

ಇದೇ ಸಂದರ್ಭದಲ್ಲಿ ಡೆಂಗಿ ಜ್ವರ ನಿಯಂತ್ರಣ ಮತ್ತು ಮುಂಜಾಗ್ರತಾ ಕ್ರಮಗಳ ಕುರಿತು ಭಿತ್ತಿಪತ್ರವನ್ನು ಬಿಡುಗಡೆಗೊಳಿಸಲಾಯಿತು.

ಸಹಾಯಕ ಕೀಟಶಾಸ್ತ್ರಜ್ಞರಾದ ಅನ್ನಪೂರ್ಣ ಶೆಟ್ಟರ್ ಅವರು ಡೆಂಗೀ ಹಾಗೂ ಇತರೆ ಕೀಟಜನ್ಯ ರೋಗಗಳ ನಿಯಂತ್ರಣ ಸಂಬಂಧಿಸಿದಂತೆ ಸೊಳ್ಳೆಯ ಜೀವನಚಕ್ರದ ಬಗ್ಗೆ ಹಾಗೂ ಲಾರ್ವಾಹಾರಿ ಮೀನುಗಳ ಕುರಿತು ಪ್ರಾತ್ಯಕ್ಷಿಕೆ ಮೂಲಕ ವಿವರಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಎಸ್.ನೀಲಗುಂದ ಅವರು ಸರ್ವರನ್ನು ಸ್ವಾಗತಿಸಿ ಸಭೆಯ ಉದ್ದೇಶವನ್ನು ವಿವರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ.ಮೀನಾಕ್ಷಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಿ.ಸಿ.ಕರಿಗೌಡ್ರ, ಡಾ. ರಾಜೇಂದ್ರ ಬಸರಿಗಿಡದ, ಡಾ.ಅರುಂಧತಿ ಕುಲಕರ್ಣಿ ಸೇರಿದಂತೆ ತಾಲೂಕಾ ಆರೋಗ್ಯಾಧಿಕಾರಿಗಳು, ವಿವಿಧ ಇಲಾಖೆ ಅಧಿಕಾರಿಗಳು, ಸಮನ್ವಯ ಸಮಿತಿ ಸದಸ್ಯರು ಹಾಜರಿದ್ದರು.

ಡೆಂಗೀ ಜ್ವರವು ಸೋಂಕು ಹೊಂದಿದ ಈಡಿಸ್ ಈಜಿಪ್ಟೈ ಎಂಬ ಸೊಳ್ಳೆಯ ಕಚ್ಚುವಿಕೆಯಿಂದ ಹರಡುತ್ತದೆ. ಈ ಸೊಳ್ಳೆಯು ಕಚ್ಚಿದ 4–8 ದಿನಗಳ ಒಳಗೆ ಈ ರೋಗದ ಪ್ರಾಥಮಿಕ ರೋಗ ಲಕ್ಷಣಗಳು ಕಂಡುಬರುತ್ತದೆ. ಡೆಂಗಿ ಜ್ವರಕ್ಕೆ ನಿರ್ದಿಷ್ಟ ಔಷಧಿ ಇರುವುದಿಲ್ಲ. ರೋಗ ಲಕ್ಷಣಗಳಿಗೆ ಅನುಗುಣವಾಗಿ ಚಿಕಿತ್ಸೆಯನ್ನು ನೀಡಿ ನಿರ್ವಹಣೆ ಮಾಡಲಾಗುವುದು. ಹೀಗಾಗಿ ಜ್ವರ ಬಂದ ನಂತರ 4 ನೇ ದಿನದಿಂದ 7 ನೇ ದಿನದವರೆಗೆ ಅತ್ಯಂತ ಎಚ್ಚರವಹಿಸಿ , ವೈದ್ಯರ ಸಲಹೆ ಪಡೆಯಬೇಕು. ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ರಕ್ತ ಪರೀಕ್ಷೆ ಮತ್ತು ಚಿಕಿತ್ಸೆಯನ್ನು ನೀಡಲಾಗುವುದು.

## ಡೆಂಗಿಜ್ವರ ಬರದಂತೆ ತಡೆಯಲು ಮುಂಜಾಗ್ರತಾ ಕ್ರಮಗಳು :

ಡೆಂಗಿ ಜ್ವರವು ಈಡಿಸ್ ಈಜಪ್ಟೈ ಸೊಳ್ಳೆಗಳಿಂದ ಹರಡುತ್ತದೆ. ಈ ಸೊಳ್ಳೆಗಳು ಹಗಲು ಹೊತ್ತಿನಲ್ಲಿ ಕಚ್ಚುವ ಸೊಳ್ಳೆಗಳಾಗಿದ್ದು ನೋಡಲು ಕಪ್ಪು ಬಿಳುಪಿನ ಪಟ್ಟಿ ಹೊಂದಿರುತ್ತದೆ. ಸ್ವಚ್ಛ ನೀರಿನಲ್ಲಿ ತನ್ನ ಸಂತತಿಯನ್ನು ( ಮೊಟ್ಟೆಗಳನ್ನಿಟ್ಟು, ಲಾರ್ವಾ ವ್ಯೂಹ, ಸೊಳ್ಳೆ) ವೃದ್ಧಿಸಿಕೊಳ್ಳುತ್ತದೆ. ಸೊಳ್ಳೆಗಳ ಮತ್ತು ಅದರ ಉತ್ಪತ್ತಿ ತಾಣಗಳನ್ನು ನಾಶಪಡಿಸುವ ಮೂಲಕ ನಿಯಂತ್ರಿಸಬಹುದು. ಮನೆ/ ಕಚೇರಿ/ ಸಂಸ್ಥೆಗಳ ಹೊರಗಿನ ಮಳೆ ನೀರು ನಿಲ್ಲುವ ಘನ ತ್ಯಾಜ್ಯ ವಸ್ತುಗಳಾದ ಒಡೆದ ಮಡಿಕೆಚೂರು, ತೆಂಗಿನಚಿಪ್ಪು, ಬಾಟಲುಗಳು, ಟೈರು, ಟೀ/ ಕಾಫಿ ಕುಡಿದು ಬೀಸಾಡಿದ ಲೋಟಗಳು, ಉಪಯೋಗಕ್ಕೆ ಬಾರದಂತಹ ನೀರು ನಿಲ್ಲುವ ವಸ್ತುಗಳಲ್ಲಿ ನೀರು ನಿಲ್ಲದಂತೆ ಎಚ್ಚರ ವಹಿಸಿ, ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಬೇಕು.

**ಡಿ.ಎಚ್.ಓ. ಡಾ.ಎಸ್.ಎಸ್.ನೀಲಗುಂದ**

# ಶಿಕ್ಷಕರ ಸಂಘದ ನೂತನ ಪದಾಧಿಕಾರಿಗಳಿಗೆ ಸನ್ಮಾನ



**ಬೆಳಗಾವಿ ವಾರ್ತೆ ವಿಜಯಪುರ:** ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಕ್ಕೆ ವಿಜಯಪುರ ನಗರ ಘಟಕಕ್ಕೆ ಆಯ್ಕೆಯಾದ ನೂತನ ಪದಾಧಿಕಾರಿಗಳಿಗೆ ಸಿಂದಗಿ ತಾಲೂಕು ಹಾಗೂ ನಗರ ವಲಯದ ಸಮಸ್ತ ಶಿಕ್ಷಕರ ಪರವಾಗಿ ಗೌರವ ಸನ್ಮಾನ ನಡೆಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ನಗರ ವಲಯದ ನೂತನ ಅಧ್ಯಕ್ಷ ಸಯ್ಯದ ಜುಬೇರ ಕೆರೂರ, ಹಲವಾರು ವರ್ಷಗಳಿಂದ ಶಿಕ್ಷಕರ ಸೇವೆಯನ್ನು ಪ್ರಾಮಾಣಿಕವಾಗಿ ಮಾಡುತ್ತ ಬಂದಿರುವೆ. ಅದಕ್ಕಾಗಿ ಹೊಸ ಜವಾಬ್ದಾರಿ ದೊರೆತಿದ್ದು, ಮುಂಬರುವ ದಿನಗಳಲ್ಲಿ ಶಿಕ್ಷಕರ ಸಮಸ್ಯೆಗಳಿಗೆ ಹೆಚ್ಚಿನ ರೀತಿಯಲ್ಲಿ ಸ್ಪಂದಿಸಿ ಕಾರ್ಯ ನಿರ್ವಹಿಸುತ್ತೇನೆ ಎಂದರು.

ಸನ್ಮಾನ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಸಿಂದಗಿ ತಾಲೂಕು ಶಿಕ್ಷಕರ ಸಂಘದ ಮಾಜಿ ಅಧ್ಯಕ್ಷ ಯು ಐ ಶೇಖ, ಶಿಕ್ಷಕರ ಸಮಸ್ಯೆಗಳಿಗೆ ಸದಾ ಧ್ವನಿಯಾಗಿ ಸಂಘ ಕಾರ್ಯ ನಿರ್ವಹಿಸಬೇಕು. ಈ ಸಲ ಆಯ್ಕೆಯಾದ ನೂತನ ಪದಾಧಿಕಾರಿಗಳೆಲ್ಲರು ಕ್ರೀಯಾಶೀಲರಾಗಿದ್ದು, ಉತ್ತಮ ಕಾರ್ಯ ನಿರ್ವಹಣೆ ಮಾಡುವ ಭರವಸೆಯಿದೆ. ಅಧಿಕಾರ ಸಿಕ್ಕಾಗ ಉತ್ತಮ ಸೇವೆ ಮಾಡುವ ಗುರಿ ಹೊಂದಿರಬೇಕು ಈ ನಿಟ್ಟಿನಲ್ಲಿ ಕೆಲಸ ಮಾಡಬೇಕೆಂದು ಶುಭ ಕೋರಿದರು.

ನೂತನ ಪದಾಧಿಕಾರಿಗಳಾದ ಮಂಜುನಾಥ ಅರೆಶಂಕರ, ಬಸೀರ ನದಾಫ, ಅಜೀಜ ಅರಳಿಮಟ್ಟಿ, ಶಿವಾನಂದ ರೂಗಿ, ಕಬೂಲ್ ಕೊಕಟನೂರ ಇವರನ್ನು ಸಿಂದಗಿ ತಾಲೂಕು ಹಾಗೂ ವಿಜಯಪುರ ನಗರದ ಸಮಸ್ತ ಶಿಕ್ಷಕರ ಪರವಾಗಿ ಸನ್ಮಾನ ಮಾಡಿ ಗೌರವಿಸಲಾಯಿತು. ರಿಯಾಜ ತಮದಡ್ಡಿ, ಅಲ್ತಾಫ ಸಾಲೋಟಗಿ, ಸರತಾಜ ಬಗಲಿ, ಲತೀಫ ಬಾಗವಾನ, ಝಮೀರ ನಾಗರಬೌಡಿ, ಅಬೀದ ಬುರಕಾಪೋಷ, ಅಜರ್ ಮುಲ್ಲಾ, ಹಾಶಿಂಪೀರ ಇನಾಮದಾರ, ಪಿ ಎ ಚಿಕ್ಕಗಸಿ, ಫಯಾಝು ತಮದಡ್ಡಿ ಸೇರಿದಂತೆ ನೂರಾರು ಶಿಕ್ಷಕರು ಪಾಲ್ಗೊಂಡಿದ್ದರು.

# ಉಚಿತ ಯೋಗ ತರಬೇತಿಗೆ ನೋಂದಣಿ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಭಾರತ ಸರಕಾರದ ಆಯುಷ ಮಂತ್ರಾಲಯವು 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಇದೇ ಜೂನ್ 21 ರಂದು ರಾಷ್ಟ್ರಾದ್ಯಂತ ಆಚರಿಸಲು ನಿರ್ಧರಿಸಲಾಗಿದ್ದು, ಈ ಹಿನ್ನಲೆಯಲ್ಲಿ ಉಚಿತವಾಗಿ 14 ದಿನಗಳ ಯೋಗ ತರಬೇತಿಯನ್ನು ಆನ್‌ಲೈನ್ ಮೂಲಕ ಮೊರಾರ್ಜಿ ದೇಸಾಯಿ ಯೋಗ ಸಂಸ್ಥೆ ನವ ದೆಹಲಿಯಿಂದ ಕಾರ್ಯಕ್ರಮ ಆಯೋಜಿಸಲಾಗಿದೆ. ತರಬೇತಿಯಲ್ಲಿ ಪಾಲ್ಗೊಳ್ಳಲು ಆಯುಷ ಮಂತ್ರಾಲಯದ ವೆಬ್‌ಸೈಟ್ http://moahabityoga?ref=karnataka ನಲ್ಲಿ ಜಿಲ್ಲೆಯ ಎಲ್ಲ ಸರಕಾರಿ ನೌಕರರು ಹಾಗೂ ಅವರ ಕುಟುಂಬದ ಸದಸ್ಯರು, ಶಾಲಾ-ಕಾಲೇಜು ವಿದ್ಯಾರ್ಥಿಗಳು & ಸಾರ್ವಜನಿಕರು ನೋಂದಾಯಿಸಿಕೊಂಡು ತರಬೇತಿ ಪಡೆದುಕೊಂಡು ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಜಿಲ್ಲಾ ಆಯುಷ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಳಸಾಪುರ ರಸ್ತೆಯಲ್ಲಿ 1 ಕೋಟಿ ರೂ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಸಚಿವ ಎಚ್.ಕೆ. ಪಾಟೀಲ ಚಾಲನೆ



**ಬೆಳಗಾವಿ ವಾರ್ತೆ ಗದಗ:** ನಗರದ ಕಳಸಾಪುರ ರಸ್ತೆ ಇಂಡಿಯನ್ ಬ್ಯಾಂಕ್ ಹತ್ತಿರದ ವಾರ್ಡ್ ಸಂಖ್ಯೆ 34 ಮತ್ತು 35ರಲ್ಲಿ 1 ಕೋಟಿ ರೂ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾದ ಸಿ.ಸಿ ರಸ್ತೆ ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಗೆ ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳ ಸಚಿವ ಎಚ್ ಕೆ ಪಾಟೀಲರು ಮಂಗಳವಾರ ಭೂಮಿ ಪೂಜೆ ನೆರವೇರಿಸಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ನಗರದ ಅಭಿವೃದ್ಧಿಗೆ ಉತ್ತಮ ಗುಣಮಟ್ಟದ ರಸ್ತೆ ನಿರ್ಮಾಣ ಅಗತ್ಯವಾಗಿದ್ದು, ಕಾಮಗಾರಿ ಯಾವುದೇ ಕಾರಣಕ್ಕೂ ಕಳಪೆಯಾಗಬಾರದು ಎಂದು ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ರಸ್ತೆ ನಿರ್ಮಾಣದಲ್ಲಿ ಗುಣಮಟ್ಟಕ್ಕೆ ಮೊದಲ ಆದ್ಯತೆ ನೀಡಬೇಕು. ಸಾರ್ವಜನಿಕರು ವರ್ಷಗಳ ಕಾಲ ಸುಗಮವಾಗಿ ಸಂಚಾರ ಮಾಡಲು ಅನುಕೂಲವಾಗುವ ರೀತಿಯಲ್ಲಿ ಕಾಮಗಾರಿ ನಡೆಯಬೇಕು ಎಂದು ಹೇಳಿದರು.

ಕಾಮಗಾರಿಯನ್ನು ನಾಲ್ಕು ತಿಂಗಳೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಸೂಚನೆ ನೀಡಿದ ಸಚಿವರು, ಇಂದಿನಿಂದಲೇ ರಸ್ತೆ ನಿರ್ಮಾಣ ಕಾರ್ಯ ಪ್ರಾರಂಭವಾಗಲಿದ್ದು, ಯಾವುದೇ ವಿಳಂಬಕ್ಕೆ ಅವಕಾಶ ನೀಡಬಾರದು ಎಂದು ತಿಳಿಸಿದರು.

ಪ್ರದೇಶದ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಮುಂದಿನ ಹಂತದಲ್ಲಿ ಇನ್ನೊಂದು ?1 ಕೋಟಿ ಅನುದಾನ ಒದಗಿಸಲಾಗುವುದು ಎಂದು ಭರವಸೆ ನೀಡಿದರು. ಸ್ಥಳೀಯ ಜನರ ಬೇಡಿಕೆಗಳಿಗೆ ಸ್ಪಂದಿಸಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಎಚ್ ಕೆ ಪಾಟೀಲರು ತಿಳಿಸಿದರು.

ಇದೇ ವೇಳೆ ಸಾರ್ವಜನಿಕ ಉದ್ಯಾನವನದ ಅಭಿವೃದ್ಧಿಗೂ ವಿಶೇಷ ಒತ್ತು ನೀಡಿದ ಸಚಿವರು, ಉದ್ಯಾನವನದಲ್ಲಿ ಜಿಮ್ ಸಾಮಗ್ರಿಗಳನ್ನು ಖರೀದಿಸಲು ?5 ಲಕ್ಷ ಅನುದಾನ ನೀಡುವುದಾಗಿ ಘೋಷಿಸಿದರು. ಉದ್ಯಾನವನವನ್ನು ಸುಂದರ ಹಾಗೂ ಸಾರ್ವಜನಿಕರಿಗೆ ಉಪಯುಕ್ತವಾಗುವ ರೀತಿಯಲ್ಲಿ ಅಭಿವೃದ್ಧಿಪಡಿಸಬೇಕು ಎಂದು ಅಧಿಕಾರಿಗಳಿಗೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ ಅವರು ಸೂಚಿಸಿದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಜಿ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಪ್ರಮುಖರಾದ ಉಷಾ ದಾಸರ, ಅನೀಲ ಗರಗ, ದುರಗೇಶ್ ವಿಭೂತಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ ಸೇರಿದಂತೆ ಹಲವು ಗಣ್ಯರು ಹಾಗೂ ಸ್ಥಳೀಯ ನಿವಾಸಿಗಳು ಉಪಸ್ಥಿತರಿದ್ದರು.

# ಬೆಟಗೇರಿಯಲ್ಲಿ 1 ಕೋಟಿ ರೂ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಸಚಿವ ಎಚ್.ಕೆ. ಪಾಟೀಲ ಚಾಲನೆ
## ನೂತನ ಅಂಗನವಾಡಿ ಉದ್ಘಾಟನೆ – 35 ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ

**ಬೆಳಗಾವಿ ವಾರ್ತೆ ಗದಗ:** ಗದಗ–ಬೆಟಗೇರಿ ನಗರದ ವಾರ್ಡ್ ನಂ. 06ರ ಬೆಟಗೇರಿಯಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಮತ್ತೊಂದು ಮಹತ್ವದ ಹೆಜ್ಜೆಯಾಗಿ ?1 ಕೋಟಿ ವೆಚ್ಚದ ಸಿ.ಸಿ ರಸ್ತೆ ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಗೆ ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್ ಕೆ ಪಾಟೀಲ ಅವರು ಮಂಗಳವಾರ ಭೂಮಿಪೂಜೆ ನೆರವೇರಿಸಿದರು.



ಶ್ರೀ ಚನ್ನಪ್ಪಗೌಡರ ಅವರ ಮನೆಯ ಸಮೀಪ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಸಚಿವರು ನೂತನ ಅಂಗನವಾಡಿ ಕಟ್ಟಡವನ್ನು ಉದ್ಘಾಟಿಸಿ ಸಾರ್ವಜನಿಕ ಬಳಕೆಗೆ ಸಮರ್ಪಿಸಿದರು. ಬಳಿಕ ಮಾತನಾಡಿದ ಅವರು, ನಗರದ ಸಮಗ್ರ ಅಭಿವೃದ್ಧಿಗೆ ರಸ್ತೆ, ಶಿಕ್ಷಣ ಹಾಗೂ ಮೂಲಭೂತ ಸೌಲಭ್ಯಗಳ ವಿಸ್ತರಣೆ ಅತ್ಯಗತ್ಯವಾಗಿದ್ದು, ಸರ್ಕಾರ ಜನಸಾಮಾನ್ಯರ ಅಗತ್ಯಗಳಿಗೆ ಸ್ಪಂದಿಸುವ ಕೆಲಸ ಮಾಡುತ್ತಿದೆ ಎಂದು ಹೇಳಿದರು. ಅಂಗನವಾಡಿ ಕಟ್ಟಡ ಉದ್ಘಾಟನೆ ಬಳಿಕ ಮಾತನಾಡಿದ ಸಚಿವ ಎಚ್ ಕೆ ಪಾಟೀಲ ಅವರು, ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಅಂಗನವಾಡಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದರು. "ಮಕ್ಕಳ ಪ್ರಾಥಮಿಕ ಶಿಕ್ಷಣ, ಪೌಷ್ಟಿಕ ಆಹಾರ ಹಾಗೂ ಸಂಸ್ಕಾರಗಳ ಮೊದಲ ಹಂತ ಅಂಗನವಾಡಿಯಲ್ಲಿಯೇ ಆರಂಭವಾಗುತ್ತದೆ. ಉತ್ತಮ ಸೌಲಭ್ಯಗಳೊಂದಿಗೆ ಅಂಗನವಾಡಿಗಳು ಮಕ್ಕಳ ಬೆಳವಣಿಗೆಗೆ ಪೂರಕ ವಾತಾವರಣ ಒದಗಿಸಬೇಕು," ಎಂದು ಹೇಳಿದರು.

**ಹಕ್ಕು ಪತ್ರ ವಿತರಣೆ :**

ಈ ಸಂದರ್ಭದಲ್ಲಿ ವಾರ್ಡ್‌ನ ಮೂವತ್ತೈದು ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ವಿತರಿಸಲಾಯಿತು. ನೀಲವ್ವ ಪರಸಪ್ಪ ಬಜಂತ್ರಿ, ರೇಖವ್ವ ರಾಜಪ್ಪ ಬಜಂತ್ರಿ, ಅನಂತ ಬೋಜಪ್ಪ ಬಜಂತ್ರಿ, ಯಮನವ್ವ ಬಜಂತ್ರಿ, ಮಾಯವ್ವ ಬಜಂತ್ರಿ, ಗವಿಸಿದ್ದಪ್ಪ ಬಜಂತ್ರಿ ಸೇರಿದಂತೆ ಹಲವರು ಸಚಿವರಿಂದ ಹಕ್ಕುಪತ್ರ ಸ್ವೀಕರಿಸಿದರು. ಹಕ್ಕುಪತ್ರ ವಿತರಣೆಯಿಂದ ಫಲಾನುಭವಿಗಳಲ್ಲಿ ಸಂತಸ ಮನೆಮಾಡಿತ್ತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಜಿ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ನಗರಸಭಾ ಸದಸ್ಯೆ ಲಕ್ಷ್ಮವ್ವ ಬಜಂತ್ರಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ ಸೇರಿದಂತೆ ಹಲವು ಗಣ್ಯರು ಹಾಗೂ ಸ್ಥಳೀಯ ನಿವಾಸಿಗಳು ಉಪಸ್ಥಿತರಿದ್ದರು.

# ನಾನೂ ಸಚಿವ ಸ್ಥಾನದ ಪ್ರಬಲ ಆಕಾಂಕ್ಷಿ

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ನಾನು ಕೂಡ ಸಚಿವ ಸ್ಥಾನದ ಪ್ರಬಲ ಆಕಾಂಕ್ಷಿ ಇದ್ದೇನೆ. ಆದರೆ ಹೈಕಮಾಂಡ್ ನಿರ್ಧಾರಕ್ಕೆ ತಲೆಬಾಗುತ್ತೇನೆ. ಸಚಿವ ಸಂಪುಟ ವಿಸ್ತರಣೆ ಬೇರೆ ಬೇರೆ ಕಾರಣದಿಂದ ಸ್ವಲ್ಪ ವಿಳಂಬವಾಗಿದೆ ಎಂದು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ನಿಗಮದ ಅಧ್ಯಕ್ಷರು ಹಾಗೂ ಶಾಸಕ ಪ್ರಸಾದ ಅಬ್ಬಯ್ಯ ಹೇಳಿದರು.



ನಗರದಲ್ಲಿ ಸುದ್ದಿಗಾರರೊಂದಿಗೆ ಸಿಎಂ, ಡಿಸಿಎಂ ದೆಹಲಿ ಪ್ರವಾಸದ ಕುರಿತು ಮಾಧ್ಯಮ ಪ್ರಶ್ನೆಗೆ ಉತ್ತರಿಸಿ ಮಾತನಾಡಿದ ಅವರು, ಸಚಿವ ಸಂಪುಟದ ಬಗ್ಗೆ ಇಂದು ಸಿಹಿ ಸುದ್ದಿ ಸಿಗುತ್ತದೆ ಎಂಬ ಯಾವುದೇ ಪ್ರಕ್ರಿಯೇ ಕಾಣುತ್ತಿಲ್ಲ ಎಂದರು.

ಹೈಕಮಾಂಡ್ ಅವರು ಸಿಎಂ, ಡಿಸಿಎಂಗೆ ಕರೆದಿರುವುದು ಯಾವ ಕಾರಣಕ್ಕೆ ಎಂಬುದು ಗೊತ್ತಿಲ್ಲ. ಆದರೆ ರಾಜ್ಯಸಭಾ ಸ್ಥಾನ, ಎಂಎಲ್‌ಸಿ ನಾಮ ನಿರ್ದೇಶನ ಚರ್ಚೆಗೆ ಕರೆದಿರಬಹುದು. ಪಕ್ಷದ ಬೇರೆ ಬೇರೆ ಹಿತದೃಷ್ಟಿಯಿಂದ ಕರೆದಿರ ಬಹುದು. ಸಚಿವ ಸಂಪುಟ ವಿಸ್ತರಣೆಗೆ ಕುರಿತು ಕರೆದಿದ್ದಾರೆ ಎಂಬುದು ಸ್ಪಷ್ಟತೆಯಿಲ್ಲ. ಸಚಿವ ಸಂಪುಟ ವಿಸ್ತರಣೆಯಾಗುತ್ತದೆ ಎಂದರು.

ಸಹಜವಾಗಿ ಸಿಎಂ, ಡಿಸಿಎಂ ಹೋದಾಗ ಸಚಿವರು ಒಂದಿಷ್ಟು ಜನ ಹೋಗುತ್ತಾರೆ. ಹೀಗಾಗಿ ಸಚಿವರು ದೆಹಲಿಗೆ ತೆರಳಿರುವುದಕ್ಕೆ ವಿಶೇಷ ಅರ್ಥ ಕಲ್ಪಿಸುವ ಅವಶ್ಯಕತೆ ಇಲ್ಲ. ಅಧಿಕಾರ ಹಸ್ತಾಂತರದ ಪ್ರಶ್ನೆಯೇ ಇಲ್ಲ. ಆ ಕುರಿತು ಮಾತು ಇಲ್ಲ ಎಂದರು.

# ಕುರಹಟ್ಟಿ ಪೇಟೆಯಲ್ಲಿ 1 ಕೋಟಿ ರೂ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಸಚಿವ ಎಚ್.ಕೆ. ಪಾಟೀಲ ಚಾಲನೆ
## ಗುಣಮಟ್ಟದ ಕಾಮಗಾರಿಗೆ ಅಧಿಕಾರಿಗಳು–ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ

**ಬೆಳಗಾವಿ ವಾರ್ತೆ ಗದಗ:** ಗದಗ–ಬೆಟಗೇರಿ ನಗರದ ವಾರ್ಡ್ ನಂ. 10ರ ಕುರಹಟ್ಟಿ ಪೇಟೆಯಲ್ಲಿ ?1 ಕೋಟಿ ವೆಚ್ಚದ ಸಿ.ಸಿ ರಸ್ತೆ ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಗೆ ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್ ಕೆ ಪಾಟೀಲರು ಮಂಗಳವಾರ ಭೂಮಿಪೂಜೆ ನೆರವೇರಿಸಿದರು.



2025–26ನೇ ಸಾಲಿನ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಕಾರ್ಯಕ್ರಮ ಯೋಜನೆಯಡಿ ಕೈಗೆತ್ತಿಕೊಳ್ಳಲಾಗಿರುವ ಈ ಕಾಮಗಾರಿಯು ಸುಮಾರು ನಾಲ್ಕು ತಿಂಗಳೊಳಗೆ ಪೂರ್ಣಗೊಳ್ಳಲಿದ್ದು, ರಸ್ತೆ ಅಭಿವೃದ್ಧಿ ಕಾರ್ಯಗಳನ್ನು ಗುಣಮಟ್ಟದಿಂದ ಪೂರ್ಣಗೊಳಿಸುವಂತೆ ಸಚಿವರು ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಸೂಚಿಸಿದರು.

"ಸಾರ್ವಜನಿಕರ ಅನುಕೂಲಕ್ಕಾಗಿ ಕೈಗೆತ್ತಿಕೊಳ್ಳಲಾಗುತ್ತಿರುವ ರಸ್ತೆ ಕಾಮಗಾರಿಗಳು ದೀರ್ಘಕಾಲ ಬಾಳಿಕೆ ಬರುವಂತಾಗಬೇಕು. ಕಾಮಗಾರಿಯ ಪ್ರತಿಯೊಂದು ಹಂತದಲ್ಲೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ನಿಗಾ ವಹಿಸಬೇಕು. ಗುಣಮಟ್ಟದಲ್ಲಿ ಯಾವುದೇ ರಾಜಿ ಆಗಬಾರದು," ಎಂದು ಎಚ್ ಕೆ ಪಾಟೀಲರು ಎಚ್ಚರಿಕೆ ನೀಡಿದರು.

ಅವರು ಮುಂದುವರಿದು, ನಗರಾಭಿವೃದ್ಧಿಯ ದೃಷ್ಟಿಯಿಂದ ಮೂಲಸೌಕರ್ಯಗಳ ಅಭಿವೃದ್ಧಿ ಅತ್ಯಂತ ಮುಖ್ಯವಾಗಿದ್ದು, ರಸ್ತೆ, ಕುಡಿಯುವ ನೀರು ಹಾಗೂ ಸಾರ್ವಜನಿಕ ಸೌಲಭ್ಯಗಳಿಗೆ ಸರ್ಕಾರ ಆದ್ಯತೆ ನೀಡುತ್ತಿದೆ ಎಂದರು.

ಕುರಹಟ್ಟಿ ಪೇಟೆ ಭಾಗದಲ್ಲಿ ಉತ್ತಮ ರಸ್ತೆ ನಿರ್ಮಾಣದಿಂದ ಸ್ಥಳೀಯ ನಿವಾಸಿಗಳಿಗೆ ಅನುಕೂಲವಾಗಲಿದ್ದು, ಸಂಚಾರ ವ್ಯವಸ್ಥೆಯೂ ಸುಧಾರಿಸಲಿದೆ ಎಂದು ಸಚಿವರು ಹೇಳಿದರು.

ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿ ವಾರ್ಡ್ ನಂ. 10ರಲ್ಲಿ ನೂತನವಾಗಿ ನಿರ್ಮಿಸಲಾದ ಅಂಗನವಾಡಿ ಕಟ್ಟಡವನ್ನು ಸಚಿವರು ಲೋಕಾರ್ಪಣೆ ಮಾಡಿದರು. ಬಳಿಕ ಮಾತನಾಡಿದ ಸಚಿವರು, ಮಕ್ಕಳ ಶೈಕ್ಷಣಿಕ ಜೀವನದ ಅಡಿಪಾಯ ಅಂಗನವಾಡಿಗಳಲ್ಲಿಯೇ ನಿರ್ಮಾಣವಾಗುತ್ತದೆ ಎಂದು ಹೇಳಿದರು. "ಅಂಗನವಾಡಿಗಳು ಕೇವಲ ಪೋಷಣಾ ಕೇಂದ್ರಗಳಲ್ಲ; ಮಕ್ಕಳ ಬೌದ್ಧಿಕ ಹಾಗೂ ಸಾಮಾಜಿಕ ಬೆಳವಣಿಗೆಯ ಮೊದಲ ಪಾಠಶಾಲೆಗಳಾಗಿವೆ. ಉತ್ತಮ ಕಟ್ಟಡಗಳು ಮತ್ತು ಸಮರ್ಪಕ ಸೌಲಭ್ಯಗಳೊಂದಿಗೆ ಅಂಗನವಾಡಿಗಳು ಗುಣಮಟ್ಟದ ಶಿಕ್ಷಣ ಕೇಂದ್ರಗಳಾಗಿ ರೂಪುಗೊಳ್ಳಬೇಕು," ಎಂದು ಸಚಿವ ಎಚ್ ಕೆ ಪಾಟೀಲರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಜಿ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ನಗರಸಭಾ ಸದಸ್ಯ ಇಮ್ತಿಯಾಜ್ ಶಿರಹಟ್ಟಿ, ಮುಖ್ಯಸ್ಥರಾದ ಜಾಂಗೀರ ಅಣ್ಣೀಗೇರಿ, ಈಶ್ವರ ಗದುಗಿನ, ಹಣಗಿ ಭಾಷಾ, ಇಬ್ರಾಹಿಂ ಶಿರಹಟ್ಟಿ, ಸೋಫೀನ್ ಅಣ್ಣಿಗೇರಿ, ಫಾರುಕ್ ಮಖಾಂದಾರ್, ಯಾಶೀನ್, ಬಸವರಾಜ ಕಡೇಮನಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ ಸೇರಿದಂತೆ ಇತರರು ಇದ್ದರು.

# ಕಾರ್ಯಕರ್ತನ ಮನೆಗೆ ಭೇಟಿ ಬಿಜೆಪಿ ನಿಯೋಗದಿಂದ ಹಳ್ಳಿಕೇರಿಗೆ ಸ್ವಾಂತನ
## ಶಾಸಕ ಹಿಟ್ನಾಳ್ ಬೆಂಬಲಿಗನಿಂದ ದೌರ್ಜನ್ಯಕ್ಕೆ ಒಳಗಾಗಿದ್ದ ಕಾರ್ಯಕರ್ತ

**ಬೆಳಗಾವಿ ವಾರ್ತೆ ಕೊಪ್ಪಳ :** ಮಣ್ಣು ಅಕ್ರಮ ಬಯಲಿಗೆಳಿದಿದ್ದಕ್ಕೆ ಶಾಸಕ ರಾಘವೇಂದ್ರ ಹಿಟ್ನಾಳ್ ಬೆಂಬಲಿಗನಾಗಿರುವ ಜಿಪಂ ಮಾಜಿ ಸದಸ್ಯೆ ಪತಿ ಭರಮಪ್ಪ ನಗರ ಎಂಬ ವ್ಯಕ್ತಿಯಿಂದ ದೌರ್ಜನ್ಯಕ್ಕೆ ಒಳಗಾಗಿರುವ ತಾಲೂಕಿನ ನೆಲೋಗಿಪುರ ಗ್ರಾಮದ ಬಿಜೆಪಿ ಹಿರಿಯ ಕಾರ್ಯಕರ್ತನ ಮನೆಗೆ ಮಂಗಳವಾರ ಕಮಲ ಪಡೆಯ ನಾಯಕರು ಹಾಗೂ ಕಾರ್ಯಕರ್ತರು ಭೇಟಿ ನೀಡಿ, ಧೈರ್ಯ ತುಂಬಿದರು.



ಕೊಪ್ಪಳ ತಾಲೂಕಿನ ನೆಲೋಗಿಪುರ ಗ್ರಾಮದ ಬಳಿಯ ತುಂಗಭದ್ರಾ ಹಿನ್ನೀರು ಪ್ರದೇಶದಲ್ಲಿನ ಮಣ್ಣನ್ನು ಅಕ್ರಮವಾಗಿ ಎತ್ತಿ ಬೇರೆಡೆ ಸುಮಾರು 2 ಎಕರೆ ಪ್ರದೇಶದಲ್ಲಿ ಸಂಗ್ರಹಣೆ ಮಾಡಿರುವ ಗಂಭೀರ ಅಕ್ರಮವನ್ನು ಬೆಳಕಿಗೆ ತಂದಿದ್ದ ಹಿನ್ನಲೆ ಬಿಜೆಪಿ ಪಕ್ಷದ ಹಿರಿಯ ಕಾರ್ಯಕರ್ತ ಭೀಮೇಶ ಹಳ್ಳಿಕೇರಿ ಅವರಿಗೆ ಭರಮಪ್ಪ ಹಟ್ಟಿ ಜೀವ ಬೆದರಿಕೆ ಹಾಕಿದ್ದರು.

ಈ ಹಿನ್ನಲೆ ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್, ಕೊಪ್ಪಳ ಲೋಕಸಭಾ ಕ್ಷೇತ್ರದ ನಿಕಟಪೂರ್ವ ಅಭ್ಯರ್ಥಿ ಬಸವರಾಜ ಕ್ಯಾವಟರ್ ಸೇರಿದಂತೆ ಮುಖಂಡರು ಹಾಗೂ ಕಾರ್ಯಕರ್ತರು ಭೀಮೇಶ ಹಳ್ಳಿಕೇರಿಗೆ ಧೈರ್ಯ ತುಂಬಿ, ನಿಮ್ಮ ಜತೆ ನಾವಿದ್ದೇವೆ, ಎದೆಗುಂದಬೇಡಿ ಎಂದು ಧೈರ್ಯ ತುಂಬಿದರು.

ಅಲ್ಲದೆ, ಇಂತಹ ಅಕ್ರಮದ ವಿರುದ್ಧ ಕ್ರಮ ಕೈಗೊಳ್ಳುವ ಬದಲು ಸತ್ಯವನ್ನು ಬಹಿರಂಗಪಡಿಸಿದ ಕಾರ್ಯಕರ್ತರನ್ನೇ ಬೆದರಿಸುವ ಪ್ರಯತ್ನ ಮಾಡಿದ ಪೊಲೀಸ್ ಇಲಾಖೆಯ ಕಾರ್ಯವನ್ನು ಇದೇ ವೇಳೆ ಬಿಜೆಪಿ ನಾಯಕರು ಖಂಡಿಸಿದರು.

ಈ ಪ್ರಕರಣದಲ್ಲಿ ಕೆಲ ಪೊಲೀಸ್ ಅಧಿಕಾರಿಗಳ ನಿರ್ಲಕ್ಷ ಹಾಗೂ ರಾಜಕೀಯ ವ್ಯಕ್ತಿಗಳ ಪ್ರಭಾವ ಸ್ಪಷ್ಟವಾಗಿ ಕಾಣಿಸುತ್ತಿದೆ. ಅಕ್ರಮದ ಬಗ್ಗೆ ಮಾಹಿತಿ ಮತ್ತು ಸಾಕ್ಷಿಗಳು ಇದ್ದರೂ ಕೂಡ ಕ್ರಮ ಕೈಗೊಳ್ಳಲು ವಿಳಂಬವಾಗುತ್ತಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆಯ ಪತಿಯಾದ ಭರಮಪ್ಪ ನಗರ ಅವರು ಬೆದರಿಕೆ ಹಾಕಿರುವ ವಿಚಾರ ಗಂಭೀರ ತನಿಖೆಗೆ ಒಳಪಡಬೇಕು.

ಈ ಬೆದರಿಕೆಯ ಹಿಂದೆ ಯಾರ ರಾಜಕೀಯ ಶಕ್ತಿ ಕೆಲಸ ಮಾಡುತ್ತಿದೆ...? ಯಾರ ಆಶ್ರಯದಲ್ಲಿ ಈ ದಬ್ಬಾಳಿಕೆ ನಡೆಯುತ್ತಿದೆ ಎಂಬುದು ರಾಜ್ಯದ ಜನರ ಮುಂದೆ ಬರಲೇಬೇಕು. ಸತ್ಯ ಹೇಳಿದವರಿಗೆ ರಕ್ಷಣೆ ಸಿಗದೇ, ಅಕ್ರಮ ಮಾಡಿದವರಿಗೆ ರಾಜಕೀಯ ಪ್ರಭಾವ ಮತ್ತು ಅಧಿಕಾರದ ರಕ್ಷಣೆ ಸಿಗುವ ಪರಿಸ್ಥಿತಿ ನಿರ್ಮಾಣವಾಗಿದ್ದರೆ ಸಾಮಾನ್ಯ ಜನರು ನ್ಯಾಯದ ಮೇಲೆ ಹೇಗೆ ನಂಬಿಕೆ ಇಡಬೇಕು..?

ಒಬ್ಬ ಕಾರ್ಯಕರ್ತ ಅಕ್ರಮದ ವಿರುದ್ಧ ಧ್ವನಿ ಎತ್ತಿದರೆ ಅವನನ್ನು ಪೊಲೀಸರು ಬೆದರಿಸುವುದು ಕೇವಲ ವ್ಯಕ್ತಿಯ ಮೇಲಿನ ದಾಳಿ ಅಲ್ಲ, ಅದು ಪ್ರಜಾಪ್ರಭುತ್ವ ಮತ್ತು ಸತ್ಯದ ಧ್ವನಿಯ ಮೇಲಿನ ದಾಳಿ ಎಂದು ಬಿಜೆಪಿ ಪಕ್ಷದ ನಾಯಕರು ಇದೇ ವೇಳೆ ಆಕ್ರೋಶ ವ್ಯಕ್ತಪಡಿಸಿದರು.

ಕೊನೆಗೆ "ನೀವು ಸತ್ಯಕ್ಕಾಗಿ ಹೋರಾಟ ಮಾಡುತ್ತಿದ್ದೀರಿ, ನಿಮ್ಮೊಂದಿಗೆ ನಾವು ಗಟ್ಟಿಯಾಗಿ ನಿಲ್ಲುತ್ತೇವೆ" ಎಂಬ ವಿಶ್ವಾಸವನ್ನು ಬಿಜೆಪಿ ಕಾರ್ಯಕರ್ತ ಭೀಮೇಶನಿಗೆ ಮುಖಂಡರು ನೀಡಿದರು. ಗ್ರಾಮೀಣ ಮಂಡಲ ಅಧ್ಯಕ್ಷ ವೀರೇಶ ಸಜ್ಜನ, ಮುಖಂಡರಾದ ಮಹಾಂತೇಶ ಪಾಟೀಲ್ ಮೈನಳ್ಳಿ, ಮುಖಂಡ ಪ್ರದೀಪ ಹಿಟ್ನಾಳ್, ಗಣೇಶ್ ಹೊರತಟ್ನಾಳ, ಉಮೇಶ್ ಕುರ್ಡೇಕರ್, ಡಾ . ಸಿದ್ದಲಿಂಗಸ್ವಾಮಿ, ಅಂದಪ್ಪ ಯಲ್ಲಮ್ಮನವರ್ ಹಾಗೂ ಗ್ರಾಮದ ಹಿರಿಯರು ಉಪಸ್ಥಿತರಿದ್ದರು.

# ಆರೋಗ್ಯ ತಪಾಸಣೆ ಮಾನವೀಯ ಸೇವೆ : ಹೆಚ್. ಆರ್ ಶ್ರೀನಾಥ್ ಅಭಿಮತ



**ಬೆಳಗಾವಿ ವಾರ್ತೆ ಗಂಗಾವತಿ :** ಮನುಷ್ಯನ ಜಾತಿ ಮತ ಪಂಥ ಭೇದ ಎಣಿಸದೆ ಸರ್ವ ಜನಾಂಗಕ್ಕೂ ಆರೋಗ್ಯ ಸೇವೆ ಮಾಡುವುದು ಮಾನವೀಯ ಅತ್ಯಂತ ಉನ್ನತ ಸೇವೆಯಾಗಿದೆ ಎಂದು ಮಾಜಿ ಎಂಎಲ್ಸಿ ಹಾಗೂ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹೆಚ್ ಆರ್ ಶ್ರೀನಾಥ್ ಅಭಿಮತ ವ್ಯಕ್ತ ಪಡಿಸಿದರು.

ಅವರು ನಗರದ ಶ್ರೀ ಸೀತಾರಾಮ ಆಂಜನೇಯ ದೇವಸ್ಥಾನದ ಆವರಣದಲ್ಲಿ ಡಾಕ್ಟರ್ ಆರ್ ಬಿ ಪಾಟೀಲ್ ಫೌಂಡೇಶನ್ ಹಾಗೂ ಶ್ರೀ ಅಂಜನಾದ್ರಿ ಗೆಜ್ಜೆ ಹೆಜ್ಜೆ ಜನಸೇವಾ ಕಲಾ ಟ್ರಸ್ಟ್ ಏರ್ಪಡಿಸಿರುವ ಎರಡು ದಿನಗಳ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿ ಜಾಗೃತಿಯ ಕೊರತೆಯಿಂದ ಅನೇಕ ರೋಗಗಳು ಜನರಲ್ಲಿ ಉಲ್ಬಣಗೊಳ್ಳುತ್ತಿದ್ದು ಇಂಥ ಶಿಬಿರಗಳು ಆರ್ಥಿಕ ವೆಚ್ಚ ತಗ್ಗಿಸುವ ಜೊತೆಗೆ ಆರೋಗ್ಯ ಕ್ರಮಗಳಿಗೆ ಸಹಕಾರಿ ಆಗುತ್ತದೆ ಸರ್ಕಾರ ಗಳ ಸೌಲಭ್ಯ ಪಡೆಯಲು ನೆರವಾಗುತ್ತದೆ ಎಂದರು.

ವೇದಿಕೆ ದಿವ್ಯ ಸಾನಿಧ್ಯ ವಹಿಸಿದ್ದ ಸುಳೆಕಲ್ ಬೃಹನ್ ಮಠದ ಪರಮಪೂಜ್ಯ ಶ್ರೀ ಭುವನೇಶ್ವರ ತಾತನವರು ಮಾತನಾಡಿ, ದಿವ್ಯ ಸಾನಿಧ್ಯ ವಹಿಸಿದ್ದ ಹಜರತ್ ಸೈಯ್ಯದ್ ಷಾ ನೂರುಲ್ಲಾ ನಬೀರಾ ಖಾದ್ರಿ ಗಂಗಾವತಿ ಇವರು ಮಾತನಾಡಿ ಹಿಂದು ಮುಸ್ಲಿಂ ಸಿಕ್ ಸಾಯಿ ಎಲ್ಲ ಧರ್ಮಗಳಿಗೂ ಒಂದೇ ಮಾನವ ಗುಣ ಇದ್ದು ಅದನ್ನು ಗುರುತಿಸುವ ನಮ್ಮೆಲ್ಲರದ್ದು ಮನುಷ್ಯತ್ವ ಸರ್ವರು ಬದುಕುವ ಗುಣ ಎಲ್ಲರೂ ಬೆಳೆಸಿಕೊಳ್ಳಬೇಕಿದೆ ಎಂದು ಕಿವಿಮಾತು ಹೇಳಿದರು.

ಆರೋಗ್ಯ ಸೇವೆ ಮಾನವ ಕುಲಕ್ಕೆ ಜಯವಾಗಲಿ ಎನ್ನುವ ವಾಣಿಯನ್ನು ಎತ್ತಿ ಹಿಡಿದಂತೆ ಸಾಮೂಹಿಕ ಆರೋಗ್ಯ ಸೇವೆ ಬಡವರ ಆರ್ಥಿಕ ಅವರೆಯನ್ನು ತಗ್ಗಿಸುವದಲ್ಲದೆ ಆತ್ಮವಿಶ್ವಾಸವನ್ನು ವೃದ್ಧಿಸಿದಂತಾಗುತ್ತದೆ ಎಂದು ಹೇಳಿದರು.

ಡಾ. ಆರ್ ಬಿ ಪಾಟೀಲ್ ಫೌಂಡೇಶನ್ ಅಧ್ಯಕ್ಷರು ಶಿಬಿರದ ರೂವಾರಿಗಳಾದ ಆರ್ ಬಿ ಪಾಟೀಲ್ ವಕೀಲರು ಮಾತನಾಡಿ ಗಂಗಾವತಿ ವಿಧಾನಸಭಾ ಕ್ಷೇತ್ರದ ಜನತೆ ಸದೃಢ ಆರೋಗ್ಯ ಹೊಂದಬೇಕು ಅಂತ ಹಂತವಾಗಿ ಎಲ್ಲಾ ಹೋಬಳಿ ಕೇಂದ್ರಗಳಲ್ಲೂ ಉಚಿತ ತಪಾಸಣಾ ಶಿಬಿರಗಳ ಮೂಲಕ ಆರೋಗ್ಯ ವೃದ್ಧಿಗೆ ಶ್ರಮಿಸುವೆ ಎಂದು ವಿವರಿಸಿದರು

ಕ್ಯಾನ್ಸರ್ ಹೃದಯ ಕಾಯಿಲೆ ಇತರ ಗಂಭೀರ ಕಾಯಿಲೆಗಳು ತಪಾಸಣೆ ಕೊರತೆಯಿಂದ ಜೀವ ಬಳಿ ಪಡೆಯುತ್ತಿದ್ದು ಇಂತಹ ಘಟನೆಗಳು ನಡೆಯದಂತೆ ಜಾಗೃತಿಗೊಳಿಸುವುದಕ್ಕಾಗಿ ಶಿಬಿರಾಯೋಜಿಸಿರುವುದಾಗಿ ಶ್ರೀ ಅಂಜನಾದ್ರಿ ಗೆಜ್ಜೆ ಹೆಜ್ಜೆ ಜನಸೇವೆ ಕಲಾ ಟ್ರಸ್ಟ್ ಅಧ್ಯಕ್ಷ ನಾಗರಾಜ್ ಇಂಗಳಗಿ ಅಭಿಪ್ರಾಯಪಟ್ಟರು.

ವೇದಿಕೆಯಲ್ಲಿ ಅರಳಹಳ್ಳಿ ಬೃಹನ್ ಮಠದ ಶ್ರೀ ರೇವಣಸಿದ್ದಯ್ಯ ತಾತನವರು ದಿವ್ಯ ಸಾನಿಧ್ಯ ವಹಿಸಿದ್ದರು. ಶ್ರೀ ಭಗೀರಥ ಉಪ್ಪಾರ ಸಮಾಜದ ಗಂಗಾವತಿ ತಾಲೂಕ ಅಧ್ಯಕ್ಷರಾದ ವೆಂಕಟೇಶ್ ಅಮರ ಜ್ಯೋತಿ, ಕರ್ನಾಟಕ ರಾಜ್ಯ ಕಟ್ಟಡ ಕಾರ್ಮಿಕರ ಹಾಗೂ ಇತರೆ ನಿರ್ಮಾಣ ಕಾರ್ಮಿಕರ ಸಂಘದ ಅಧ್ಯಕ್ಷರಾದ ಶಿವಕುಮಾರ್ ಗೌಡ ವಿಐಪಿ ಮೆಲೋಡಿಸ್ ನಾಯಕರಾದ ಪಂಪಾಪತಿ ಇಂಗಳಗಿ ಇತರರಿದ್ದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಸುವರ್ಣ ಗಿರಿ ಪತ್ರಿಕೆ ಸಂಪಾದಕರಾದ ಎಸ್.ಎಮ್ ಪಟೇಲ್ ಮುಕ್ಕಣ್ಣ ಮನಹಳ್ಳಿ ಗೋವಿಂದಪ್ಪ ಹುಲಗಿ ಇತರರನ್ನು ಸನ್ಮಾನಿಸಲಾಯಿತು.

# ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಜಿಲ್ಲಾ ವಿದ್ಯಾರ್ಥಿ ಘಟಕದ ಉಪಾಧ್ಯಕ್ಷರಾಗಿ : ವಿರೇಶ ನೆರೆಗಲ್ ಆಯ್ಕೆ

**ಬೆಳಗಾವಿ ವಾರ್ತೆ ಕೊಪ್ಪಳ :** ಕರ್ನಾಟಕ ರಾಜ್ಯ ದಲಿತ ಸಂಘರ್ಷಸಮಿತಿ ಅಂಬೇಡ್ಕರ್ ಧ್ವನಿ ರಾಜ್ಯಾಧ್ಯಕ್ಷ ಚಂದ್ರಕಾಂತ ಎಸ್. ಕಾದ್ರೋಳ್ಳಿ (ಬಣ) ಸಂಘಟನೆಯ ಕೊಪ್ಪಳ ಜಿಲ್ಲಾ ವಿದ್ಯಾರ್ಥಿ ಘಟಕದ ಜಿಲ್ಲಾ ನೂತನ ಉಪಾಧ್ಯಕ್ಷರಾಗಿ ವಿರೇಶ ಮಹೇಶಪ್ಪ ನೆರೆ ಗಲ್ ಇವರನ್ನು ಆಯ್ಕೆ ಮಾಡಲಾಯಿತು.

ಇತ್ತೀಚಿಗೆ ಕೊಪ್ಪಳ ನೀರಿಕ್ಷಣಾ ಮಂದಿರದಲ್ಲಿ ಕರೆದ ನೂತನ ಉಪಾಧ್ಯಕ್ಷರ ಆಯ್ಕೆಯಲ್ಲಿ ರಾಜ್ಯಾಧ್ಯಕ್ಷ ಚಂದ್ರಕಾಂತ ಕಾದ್ರೋಳ್ಳಿ ಇವರು ವಿರೇಶ ನೆರೆಗಲ್ ಇವರನ್ನು ವಿದ್ಯಾರ್ಥಿ ಘಟಕಕ್ಕೆ ನೂತನ ಉಪಾಧ್ಯಕ್ಷರಾಗಿ ಆಯ್ಕೆ ಮಾಡಿ ಮಾತನಾಡಿ ಸಂಘಟನೆಯನ್ನು ಕಾಯಾ, ವಾಚಾ, ಶ್ರದ್ದೆಯಿಂದ ಡಿ. ಬಾಬಾ ಸಾಹೇಬರ ತತ್ವ, ಸಿದ್ದಾಂತಗಳಿಗೆ ಬದ್ದರಾಗಿ, ಹಿರಿಯರ ಮಾರ್ಗದರ್ಶನದಲ್ಲಿ ಸಂಘಟನೆ ಮನ್ನೆಡಿಸಿಕೊಂಡು ಹೋಗಬೇಕು ಎಂದರು.

ಪದಾಧಿಕಾರಿಗಳಾದವರು ಸಂಘ ವಿರೋಧಿ ಚಟುವಟಿಕೆಯನ್ನು ಮಾಡದೇ ಸಮಾಜದ ಹಿತ ಕಾಯುವವರಾಗಬೇಕು, ಸಮಾಜದ ವಿರುದ್ಧ ನಡೆಯುವ ದಬ್ಬಾಳಿಕೆ, ದೌರ್ಜನ್ಯ, ಭ್ರಷ್ಟಾಚಾರದ ವಿರುದ್ಧ ಕೆಲಸ ಮಾಡಬೇಕು ಎಂದು ತಿಳಿಸಿದರು.



ಪದಾಧಿಕಾರಿಗಳು ಸಂಪೂರ್ಣವಾಗಿ ರಾಜ್ಯ, ಜಿಲ್ಲಾ, ತಾಲೂಕ, ಗ್ರಾಮ ಮತ್ತು ಹೋಬಳಿ ಘಟಕ ಫದಾಧಿಕಾರಿಗಳನ್ನು ಆಯ್ಕೆ ಮಾಡತಕ್ಕದ್ದು, ಯಾವುದೇ ಪದಾಧಿಕಾರಿಗಳನ್ನು ತೆಗೆದು ಹಾಕುವ ಇಟ್ಟುಕೊಳ್ಳುವ ಅಧಿಕಾರ ಸಂಪೂರ್ಣ ರಾಜ್ಯಾಧ್ಯಕ್ಷರಿಗೆ ಮತ್ತು ಸಂಸ್ಥಾಪಕರಿಗೆ ಇರುತ್ತದೆ. ಇದರ ಹೊರತು ಯಾರು, ಯಾರನ್ನು ಸಂಘಟನೆಯಿಂದ ತೆಗೆಯಬಾರದು.ಸಂಘಟನೆ ಪದಾಧಿಕಾರಿಗಳು ಸಂಘಟನೆ ದುರ್ಬಳಕೆ ಮಾಡಿಕೊಂಡು ಮಾಹಿತಿಹಕ್ಕು ಮತ್ತು ಪರ್ತಕರ್ತರೆಂದು ಹಾಗೂ ಲೋಕಾಯುಕ್ತರಿಗೆ ದೂರು ಸಲ್ಲಿಸುವುದು ಕಂಡು ಬಂದರೇ ತಕ್ಷಣವೇ ಪದಾಧಿಕಾರಿಗಳನ್ನು ಸಂಘಟನೆಯಿಂದ ತೆಗೆದು ಹಾಕಲಾಗುವುದು ಎಂದು ಹೇಳಿದ ಅವರು, ಸತ್ಯ, ನಿಷ್ಠೆ, ಪ್ರಾಮಾಣಿಕತೆಯಿಂದ ಸಂಘಟನೆ ಬಲಪಡಿಸಬೇಕು ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಪದ್ಮಾವತಿ ವಿದ್ಯಾವರ್ಧಕ ಸಂಸ್ಥೆಯಲ್ಲಿ ಐಐಟಿ ತರಬೇತಿ; ಅಧ್ಯಕ್ಷ ಸಂಜಯ ಕುಚನೂರೆ




**ಬೆಳಗಾವಿ ವಾರ್ತೆ ಮೋಳೆ ;** ಇಂದಿನ ಸ್ಪರ್ಧಾತ್ಮಕ ದಿನಗಳಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ನಗರ ಪ್ರದೇಶ ದ ವಿದ್ಯಾರ್ಥಿಗಳೊಂದಿಗೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಸ್ಪರ್ಧೆ ಮಾಡಬೇಕಾದರೆ, ಐಐಟಿ ನಿಟ್ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಶಿಕ್ಷಣ ಅನಿವಾರ್ಯ ವಾಗಿದೆ ಎಂದು ಪದ್ಮಾವತಿ ವಿದ್ಯಾವರ್ಧಕ ಸಂಸ್ಥೆ ಅಧ್ಯಕ್ಷ ಸಂಜಯ ಕುಚನೂರೆ ಹೇಳಿದರು.

ಅವರು ಬುಧವಾರ ಐನಾಪೂರ ಪಟ್ಟಣದ ಪದ್ಮಾವತಿ ವಿದ್ಯಾವರ್ಧಕ ಸಂಸ್ಥೆಯಲ್ಲಿ ಐಐಟಿ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಕೈಪಿಡಿ ಬಿಡುಗಡೆಗೊಳಿಸಿ ಮಾತನಾಡಿದರು ಐನಾಪೂರ ಪಟ್ಟಣವು ಕರ್ನಾಟಕ ಹಾಗೂ ಮಹಾರಾಷ್ಟ್ರದ ಗಡಿಯಲ್ಲಿ ಇರುವದರಿಂದ ಬಹಳಷ್ಟು ವಿಧ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ ಅದಕ್ಕಾಗಿಯೇ ನಮ್ಮ ಸಂಸ್ಥೆಯಲ್ಲಿ 6 ನೇ ತರಗತಿ ಯಿಂದ 9 ನೇ ತರಗಿತಯ ವರಗೆ ಐಐಟಿ ತರಬೇತಿಯನ್ನು ಪ್ರಾರಂಭಿಸಿದ್ದೆವೆ ಇದನ್ನು ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಸದುಪಯೋಗ ಪಡೆದುಕೊಳ್ಳುವಂತೆ ಕರೆ ನೀಡಿದರು.

ಪ್ರಾಚಾರ್ಯ ಮ್ಯಾಥ್ಯೂ ಮಾತನಾಡಿ 6 ರಿಂದ 9 ನೇ ತರಗತಿಯ ವಿದ್ಯಾರ್ಥಿಗಳಿಗೆ ಸನ್ 2026-27 ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಐಐಟಿ ಫೌಂಡೇಶನ್ ವತಿಯಿಂದ ತರಗತಿಗಳನ್ನು ಪ್ರಾರಂಭಿಸಲಾಗುತ್ತಿದ್ದು ಇದರಿಂದ ಸ್ಪರ್ಧಾತ್ಮಕ ಪರೀಕ್ಷೆಗಳಾದ ಐಐಟಿ,ಜೆಇಇ, ನೀಟ್,ಒಲಿಂಪಿಯಾಡ್ ಗಳು ಮತ್ತು ರಾಷ್ಟ್ರೀಯ ಮಟ್ಟದ ಪ್ರವೇಶ ಸ್ಪರ್ಧಾತ್ಮಕ ಪರೀಕ್ಷೆಗೆ ಭವಿಷ್ಯದಲ್ಲಿ ಅನುಕೂಲವಾಗಲಿದೆ ಎಂದರು. ಈ ಶಿಕ್ಷಣದಿಂದ ವಿಧ್ಯಾರ್ಥಿಗಳಿಗೆ ಗಣಿತ ವಿಜ್ಞಾನದಲ್ಲಿ ಪ್ರಾಥಮಿಕ ಹಂತದಲ್ಲಿಯೇ ಅಡಿಪಾಯ ಸಿಗುವುದರಿಂದ ತಾರ್ಕಿಕ ಮತ್ತು ವಿಶ್ಲೇಷಣಾತ್ಮಕ ಚಿಂತನಾ ಕೌಶಲ್ಯಗಳಲ್ಲಿ ಸುಧಾರಣೆ, ಸ್ಪರ್ಧಾತ್ಮಕ ಪರಿಕ್ಷೆಗಳಿಗೆ ಆರಂಭಿಕ ತಯ್ಯಾರಿ ಸಿ ಬಿ ಎಸ್ ಇ ಪಠ್ಯ ಪರಿಕಲ್ಪನೆ ಲಭಿಸಲಾಗುವುದು ಎಂದು ಹೇಳಿದರು.

ಈ ವೇಳೆ ಅಧ್ಯಕ್ಷ ಸಂಜು ಕುಚನೂರೆ, ಉಪಾಧ್ಯಕ್ಷ ರವೀಂದ್ರ ಬಣಜವಾಡ, ಗಜಕುಮಾರ ಪಾಟೀಲ, ಬಾಪುಸಾಬ ಪಾಟೀಲ ,ಮಹಾವೀರ ಪಾಟೀಲ, ಜಯಕುಮಾರ ಪಾಟೀಲ ,ಮಹಾವೀರ ಲಿಂಬಿಕಾಯಿ, ವಸಂತ ಹುದ್ದಾರ,ಸಿದ್ದಾಂತ ಬಣಜವಾಡ, ಮಂಜುನಾಥ ಕುಚನೂರೆ, ಭರತೇಶ ತೆರದಾಳೆ, ಪ್ರಾಚಾರ್ಯ ಮ್ಯಾತ್ಯೂ ಉಪಸ್ಥಿತರಿದ್ದರು.

# ಗಡಿಯಲ್ಲಿ ಮತ್ತೆ ಕನ್ನಡ ಕಿಡಿ; ಪಾಲಿಕೆ ಠರಾವ್‌ಗೆ ಜೂನ್ 2 ಗಡುವು



**ಬೆಳಗಾವಿ ವಾರ್ತೆ ಬೆಳಗಾವಿ:** "ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ, ಗಡಿವಿವಾದದಲ್ಲಿ ಮಹಾಜನ ವರದಿಯೇ ಅಂತಿಮ" ಎಂಬ ಠರಾವ್ ಅಂಗೀಕರಿಸಬೇಕು ಎಂಬ ಆಗ್ರಹ ಮಂಗಳವಾರ ನಗರದಲ್ಲಿ ಮತ್ತೆ ಕನ್ನಡ ಹೋರಾಟದ ಕಿಡಿ ಹೊತ್ತಿಸಿತು.

ಪಾಲಿಕೆಗೆ ಮುತ್ತಿಗೆ ಹಾಕಲು ಹೊರಟಿದ್ದ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್, ಸಾ.ರಾ. ಗೋವಿಂದ ಸೇರಿದಂತೆ ಕನ್ನಡ ಸಂಘಟನೆಗಳ ಮುಖಂಡರು ಹಾಗೂ ಕಾರ್ಯಕರ್ತರನ್ನು ಪೊಲೀಸರು ಆರ್‌ಟಿಒ ವೃತ್ತದ ಬಳಿ ತಡೆದು ವಶಕ್ಕೆ ಪಡೆದರು.

ಈ ವೇಳೆ ರಸ್ತೆ ತಡೆ, ಘೋಷಣೆ, ಪೊಲೀಸ್ ವಾಹನದ ಎದುರು ಧರಣಿ, ಕಾರ್ಯಕರ್ತರನ್ನು ಎಳೆದು ವಾಹನಕ್ಕೆ ಹತ್ತಿಸುವ ದೃಶ್ಯಗಳಿಂದ ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು.


ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಹಲ್ಮಿಡಿ ಶಾಸನದ ಪ್ರತಿಮೆಗೆ ಕ್ಷೀರಾಭಿಷೇಕ ನೆರವೇರಿಸಿದ ಬಳಿಕ ಕನ್ನಡ ಸಂಘಟನೆಗಳ ಕಾರ್ಯಕರ್ತರು ಮೆರವಣಿಗೆ ಮೂಲಕ ಪಾಲಿಕೆಯತ್ತ ಹೊರಟರು. ಆದರೆ ಆರ್‌ಟಿಒ ವೃತ್ತಕ್ಕೆ ತಲುಪುತ್ತಿದ್ದಂತೆ ಪೊಲೀಸರು ವಾಹನಗಳನ್ನು ಅಡ್ಡಲಾಗಿ ನಿಲ್ಲಿಸಿ ಮೆರವಣಿಗೆಯನ್ನು ತಡೆದರು.

"ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ", "ಪಾಲಿಕೆ ಠರಾವ್ ಅಂಗೀಕರಿಸಲಿ", "ಮಹಾಜನ ವರದಿಯೇ ಅಂತಿಮ" ಎಂಬ ಘೋಷಣೆಗಳು ರಸ್ತೆಯೆಲ್ಲ ಮೊಳಗಿದವು. ಕೆಲ ಕಾರ್ಯಕರ್ತರು ರಸ್ತೆಮಧ್ಯೆ ಮಲಗಿ ಪ್ರತಿಭಟನೆ ನಡೆಸಿದರು. ಪೊಲೀಸರು ಕಾರ್ಯಕರ್ತರನ್ನು ಕೈಕಾಲು ಹಿಡಿದು ಎತ್ತಿ ವಾಹನಗಳಲ್ಲಿ ಕೂರಿಸಿದರು.

ವಾಟಾಳ್ ನಾಗರಾಜ್ ಹಾಗೂ ಸಾ.ರಾ. ಗೋವಿಂದ್ ಅವರನ್ನು ವಶಕ್ಕೆ ಪಡೆಯಲು ಪೊಲೀಸರು ಮುಂದಾದಾಗ ಮತ್ತೊಂದು ಹಂತದ ಹೈಡ್ರಾಮಾ ನಡೆಯಿತು. "ಪಾಲಿಕೆ ಆಯುಕ್ತರನ್ನು ಇಲ್ಲಿಗೇ ಕರೆಸಿ. ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ ಎಂಬ ಠರಾವ್ ಅಂಗೀಕರಿಸಲು ಏನು ಅಡ್ಡಿ? ಉತ್ತರ ಕೊಡಿ" ಎಂದು ವಾಟಾಳ್ ಪಟ್ಟು ಹಿಡಿದರು.

ವಾಟಾಳ್ ಇದ್ದ ವಾಹನ ಮುಂದೆ ಸಾಗಲು ಯತ್ನಿಸಿದಾಗ ಪೊಲೀಸರು ಅದನ್ನು ತಡೆದರು. ನಂತರ ಪೊಲೀಸ್ ಅಧಿಕಾರಿಗಳು ವಾಹನಕ್ಕೆ ಹತ್ತಿ ವಾಟಾಳ್ ಅವರನ್ನು ಕೆಳಗಿಳಿಸಿ ಪೊಲೀಸ್ ವಾಹನಕ್ಕೆ ಹತ್ತಿಸಿದರು.

# ಶಿಕ್ಷಕರ ಸಂಘಕ್ಕೆ ಕುಮಾರ ಗಾಣಿಗೇರ ಅಧ್ಯಕ್ಷ



**ಬೆಳಗಾವಿ ವಾರ್ತೆ ಮೋಳೆ;-** ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ತಾಲೂಕ ಘಟಕ ಕಾಗವಾಡ 2026-2031 ರ 5 ವರ್ಷದ ಅವಧಿಗೆ ನೂತನ ಅಧ್ಯಕ್ಷರಾಗಿ ಕುಮಾರ ಗಾಣಿಗೇರ ಅವಿರೋಧವಾಗಿ ಆಯ್ಕೆಯಾದರು.

ಇತ್ತಿಚಿಗೆ ನಡೆದ ಕಾಗವಾಡ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನೂತನ ಪದಾಧಿಕಾರಿಗಳು ಆಯ್ಕೆ ಜರುಗಿತು.

ಇದರಲ್ಲಿ ಅಧ್ಯಕ್ಷರಾಗಿ ಕುಮಾರ ಗಾಣಿಗೇರ,ಪ್ರಧಾನ ಕಾರ್ಯದರ್ಶಿಯಾಗಿ ಕೃಷ್ಣಾ ರಾವುತ,ಉಪಾಧ್ಯಕ್ಷರಾಗಿ ಜಕ್ಕವ್ವ ಜಮಖಂಡಿ, ಖಜಾಂಚಿಯಾಗಿ ಗುಲಾಬ ಮಾಂಜರೆ,ಸಹ ಕಾರ್ಯದರ್ಶಿಯಾಗಿ ಅರುಣಾ ಭೋಸಲೆ ಅವರು ಅವಿರೋಧವಾಗಿ ಆಯ್ಕೆಯಾದರು.

ಕಾಗವಾಡ ತಾಲ್ಲೂಕಿನ ನೂತನ ಪದಾಧಿಕಾರಿಗಳಾಗಿ ಅವಿರೋಧವಾಗಿ ಆಯ್ಕೆಯಾಗಲು ಶ್ರಮಿಸಿದ ರಾಜ್ಯ ಘಟಕದ ಅಧ್ಯಕ್ಷರು ಚಂದ್ರಶೇಖರ ನುಗ್ಲಿ ಹಾಗೂ ಪ್ರಧಾನ ಕಾರ್ಯದರ್ಶಿಗಳು,ಜಿಲ್ಲಾ ಘಟಕದ ಅಧ್ಯಕ್ಷರಿಗೆ, ನಮ್ಮ ತಾಲ್ಲೂಕಿನ ನಿಕಟಪೂರ್ವ ಅಧ್ಯಕ್ಷ ಮಾರುತಿ ಸಂಕಪಾಳ ಕಾರ್ಯಕಾರಿ ಸಮಿತಿ ಸದಸ್ಯರಿಗೆ ಮತ್ತು ತಾಲ್ಲೂಕಿನ ಸರ್ವ ಶಿಕ್ಷಕ ಹಾಗೂ ಶಿಕ್ಷಕಿಯರಿಗೆ ಅಭಿನಂದಿಸುವುದಾಗಿ ನೂತನ ಅಧ್ಯಕ್ಷ ಕುಮಾರ ಗಾಣಿಗೇರ ತಿಳಿಸಿದರು.

# ಪ.ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ

ಬಾಗಲಕೋಟೆ: ಎಸ್.ಎಸ್.ಎಲ್.ಸಿ ಹಾಗೂ ಮೆಟ್ರಿಕ್ ನಂತರದ ವಿವಿಧ ಕೋರ್ಸಗಳಲ್ಲಿ ಪ್ರಥಮ ಬಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮಂಜೂರು ಮಾಡಲು ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು http://swdservices.karnataka.gov.in/ PrizeMoneyClientApp/register ಲಿಂಕ್ ಮೂಲಕ ಅರ್ಜಿ ಸಲ್ಲಿಸಿ ದಾಖಲಾತಿಗಳೊಂದಿಗೆ ಸಂಬಂಧಪಟ್ಟ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜ ಸೇವೆಯ ಸಾರ್ಥಕತೆಗೆ ಗೌರವ ಡಾಕ್ಟರೇಟ್ ಲಕ್ಕುಂಡಿ ಪಿಡಿಒ ಅಮೀರನಾಯಕರಿಗೆ ಪ್ರತಿಷ್ಠಿತ ಸನ್ಮಾನ



**ಬೆಳಗಾವಿ ವಾರ್ತೆ ಗದಗ:** ಸಮಾಜ ಸೇವೆ, ಗ್ರಾಮೀಣ ಅಭಿವೃದ್ಧಿ ಹಾಗೂ ಜನಪರ ಆಡಳಿತದ ಮೂಲಕ ಜನಮನಗಳಲ್ಲಿ ವಿಶಿಷ್ಟ ಸ್ಥಾನ ಪಡೆದಿರುವ ಗದಗ ತಾಲ್ಲೂಕಿನ ಲಕ್ಕುಂಡಿ ಗ್ರಾಮ ಪಂಚಾಯಿತಿಯ ಪಂಚಾಯತ ಅಭಿವೃದ್ಧಿ ಅಧಿಕಾರಿ ಅಮೀರನಾಯಕ ಅವರಿಗೆ ಬೆಂಗಳೂರಿನ ಪ್ರತಿಷ್ಠಿತ ಏಷ್ಯಾ ಇಂಟರ್ನ್ಯಾಷನಲ್ ಕಲ್ಚರಲ್ ಅಕಾಡೆಮಿ ವತಿಯಿಂದ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಗಿದೆ.

ಬೆಂಗಳೂರಿನಲ್ಲಿ ನಡೆದ ಭವ್ಯ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳ ಗಣ್ಯರ ಸಮ್ಮುಖದಲ್ಲಿ ಅವರಿಗೆ ಈ ಗೌರವ ನೀಡಿ ಸನ್ಮಾನಿಸಲಾಯಿತು. ಅಧಿಕಾರವೆಂದರೆ ಕೇವಲ ಕಚೇರಿಯ ಗೋಡೆಗಳೊಳಗೆ ಸೀಮಿತವಾಗಿರುವ ವ್ಯವಸ್ಥೆಯಲ್ಲ; ಅದು ಜನರ ನೋವು-ನಲಿವುಗಳಿಗೆ ಸ್ಪಂದಿಸುವ ಸೇವಾಧರ್ಮವಾಗಬೇಕು ಎಂಬ ನಂಬಿಕೆಯನ್ನು ತಮ್ಮ ಕಾರ್ಯಶೈಲಿಯಲ್ಲಿ ಅಳವಡಿಸಿಕೊಂಡಿರುವ ಅಮೀರನಾಯಕರು, ಸರಳತೆ, ಮಾನವೀಯತೆ ಹಾಗೂ ಜನಪರ ಚಿಂತನೆಯ ಮೂಲಕ ಗ್ರಾಮೀಣ ಜನರ ಹೃದಯ ಗೆದ್ದಿದ್ದಾರೆ. ಆಡಳಿತವನ್ನು ಸೇವೆಯಾಗಿ ರೂಪಾಂತರಿಸಿಕೊಂಡಿರುವ ಅವರು, ಸರ್ಕಾರದ ವಿವಿಧ ಯೋಜನೆಗಳನ್ನು ಗ್ರಾಮೀಣ ಜನರಿಗೆ ತಲುಪಿಸುವಲ್ಲಿ ಅಪೂರ್ವ ಬದ್ಧತೆ ತೋರಿದ್ದಾರೆ.

ಲಕ್ಕುಂಡಿ ಗ್ರಾಮ ಪಂಚಾಯಿತಿಯಲ್ಲಿ ಅವರ ನೇತೃತ್ವದಲ್ಲಿ ಕೈಗೊಳ್ಳಲಾದ ಅಭಿವೃದ್ಧಿ ಕಾರ್ಯಗಳು, ಸಾರ್ವಜನಿಕ ಸಮಸ್ಯೆಗಳಿಗೆ ತೋರಿದ ತಕ್ಷಣದ ಸ್ಪಂದನೆ ಹಾಗೂ ಸಮಾಜಮುಖಿ ಕಾರ್ಯಕ್ರಮಗಳ ಯಶಸ್ವಿ ಅನುಷ್ಠಾನ ಗ್ರಾಮಸ್ಥರ ವಿಶ್ವಾಸವನ್ನು ಮತ್ತಷ್ಟು ಗಟ್ಟಿಗೊಳಿಸಿದೆ. ಇದೇ ಅವರ ಸೇವಾ ಪಯಣಕ್ಕೆ ಈ ಗೌರವ ಡಾಕ್ಟರೇಟ್ ರೂಪದಲ್ಲಿ ದೊರೆತಿರುವ ಮಹತ್ವದ ಮಾನ್ಯತೆಯಾಗಿದೆ ಎಂದು ಅಕಾಡೆಮಿಯ ಪದಾಧಿಕಾರಿಗಳು ತಿಳಿಸಿದ್ದಾರೆ.

ಆಡಳಿತ ಕ್ಷೇತ್ರದಲ್ಲಷ್ಟೇ ಅಲ್ಲದೆ ಸಾಹಿತ್ಯ, ಸಾಮಾಜಿಕ ಜಾಗೃತಿ ಮತ್ತು ಮಾನವೀಯ ಮೌಲ್ಯಗಳ ಪ್ರಚಾರದಲ್ಲಿಯೂ ಅಮೀರನಾಯಕರು ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಬಡವರು, ಹಿಂದುಳಿದವರು ಹಾಗೂ ಸಂಕಷ್ಟದಲ್ಲಿರುವ ಸಾಮಾನ್ಯ ಜನರ ಪರ ಕಾಳಜಿಯಿಂದ ಸ್ಪಂದಿಸುವ ಅವರ ಸೇವಾಮನೋಭಾವ ಅನೇಕರಿಗೆ ಪ್ರೇರಣೆಯಾಗುತ್ತಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರು ಹಾಗೂ ಗದಗ ಜಿಲ್ಲಾಧ್ಯಕ್ಷರಾದ ಡಾ. ಬಸವರಾಜ ಬಳ್ಳಾರಿಯವರು,

"ಗ್ರಾಮೀಣ ಭಾರತದ ನಿಜವಾದ ಶಕ್ತಿ ಜನಪರ ಅಧಿಕಾರಿಗಳಲ್ಲಿದೆ. ಅಂತಹ ಅಪರೂಪದ ಸೇವಾಭಾವದ ಅಧಿಕಾರಿ ಅಮೀರನಾಯಕರು. ಇವರಿಗೆ ದೊರೆತಿರುವ ಗೌರವ ಡಾಕ್ಟರೇಟ್ ಕೇವಲ ವ್ಯಕ್ತಿಗಲ್ಲ, ಗ್ರಾಮೀಣ ಸೇವಾ ಕ್ಷೇತ್ರಕ್ಕೇ ಸಂದ ಗೌರವವಾಗಿದೆ," ಎಂದು ಅಭಿಪ್ರಾಯಪಟ್ಟರು.

ಗೌರವ ಡಾಕ್ಟರೇಟ್ ಸ್ವೀಕರಿಸಿದ ಬಳಿಕ ಪ್ರತಿಕ್ರಿಯಿಸಿದ ಅಮೀರನಾಯಕರು,

"ಈ ಸನ್ಮಾನ ನನ್ನೊಬ್ಬರದ್ದಲ್ಲ. ನನ್ನೊಂದಿಗೆ ಸದಾ ಬೆಂಬಲವಾಗಿ ನಿಂತಿರುವ ಗ್ರಾಮಸ್ಥರು, ಸಹೋದ್ಯೋಗಿಗಳು, ಸ್ನೇಹಿತರು ಹಾಗೂ ಕುಟುಂಬದವರ ಪ್ರೋತ್ಸಾಹದ ಪ್ರತಿಫಲ ಇದು. ಈ ಗೌರವ ಮುಂದಿನ ದಿನಗಳಲ್ಲಿಯೂ ಇನ್ನಷ್ಟು ಜನಪರ ಸೇವೆ ಸಲ್ಲಿಸಲು ನನಗೆ ಹೊಸ ಪ್ರೇರಣೆಯಾಗಿದೆ," ಎಂದು ವಿನಮ್ರವಾಗಿ ಹೇಳಿದರು.

ಸಮಾರಂಭದಲ್ಲಿ ಹಿರಿಯ ಸಾಹಿತಿ ಎ.ಎಸ್. ಮಕಾನದಾರ, ರಾಜ್ಯ ಸಂಘದ ಜಂಟಿ ಕಾರ್ಯದರ್ಶಿ ರಾಜು ಕಂಟಿಗೊಣ್ಣವರ, ರಾಜ್ಯ ಸಂಘದ ಕ್ರೀಡಾ ಕಾರ್ಯ ದರ್ಶಿ ಐ.ಎ. ಗಾಡಗೋಳಿ, ಜಿಲ್ಲಾ ಸಂಘದ ಕಾರ್ಯದರ್ಶಿ ಎಂ.ವೈ. ಮಲಕಶೆಟ್ಟಿ, ಸಮಾಜ ಸೇವಕ ಕರೀಮಸಾಬ ಸುಣಗಾರ, ಎಸ್.ಎಸ್. ಪಾರ್ವತಿಮಠ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಅಮೀರನಾಯಕರ ಈ ಸಾಧನೆಗೆ ಗದಗ ಜಿಲ್ಲೆಯಲ್ಲಿ ಹರ್ಷದ ವಾತಾವರಣ ನಿರ್ಮಾಣವಾಗಿದ್ದು, ವಿವಿಧ ಸಂಘ-ಸಂಸ್ಥೆಗಳು, ಸಾಹಿತ್ಯ ವಲಯದ ಗಣ್ಯರು ಹಾಗೂ ಸಾರ್ವಜನಿಕರಿಂದ ಅಭಿನಂದನೆಗಳ ಮಹಾಪೂರವೇ ಹರಿದುಬಂದಿದೆ.

# ವರ್ಗಾವಣೆ: ಪ್ರಜಾವಾಣಿ ವರದಿಗಾರ ಸತೀಶ ಬೆಳ್ಳಕ್ಕಿಗೆ ಗದಗ ಜಿಲ್ಲಾ ಕಾನಿಪದಿಂದ ಆತ್ಮೀಯ ಸನ್ಮಾನ, ಬೀಳ್ಕೊಡುಗೆ



**ಬೆಳಗಾವಿ ವಾರ್ತೆ ಗದಗ:** ಪತ್ರಕರ್ತರಿಗೆ ವೃತ್ತಿ ಬದ್ಧತೆ, ಭಾಷಾ ಜ್ಞಾನ ಮತ್ತು ಓದು ಅತಿ ಮುಖ್ಯ. ಕಳೆದ ಆರು ವರ್ಷಗಳಿಂದ ಪ್ರಜಾವಾಣಿ ಪತ್ರಿಕೆಯ ಗದಗ ಜಿಲ್ಲಾ ವರದಿಗಾರರಾಗಿದ್ದ ಕೆ.ಎಂ. ಸತೀಶ ಬೆಳ್ಳಕ್ಕಿ ಅವರು ಪತ್ರಕರ್ತರಿಗೆ ಮಾದರಿ ಎಂದು ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ರಾಜು ಎಂ. ಹೆಬ್ಬಳ್ಳಿ ಅಭಿಪ್ರಾಯಪಟ್ಟರು.

ಪ್ರಜಾವಾಣಿ ಗದಗ ಜಿಲ್ಲಾ ಹಿರಿಯ ವರದಿಗಾರರು ಹಾಗೂ ಕಾನಿಪ ಸದಸ್ಯರಾದ ಸತೀಶ ಬೆಳಕ್ಕಿ ಅವರು ತುಮಕೂರ ಜಿಲ್ಲೆಗೆ ವರ್ಗಾವಣೆಗೊಂಡ ಹಿನ್ನೆಲೆಯಲ್ಲಿ ನಗರದ ಪತ್ರಿಕಾ ಭವನದಲ್ಲಿ ಗದಗ ಜಿಲ್ಲಾ ಕಾರ್ಯನಿತರ ಪತ್ರಕರ್ತರ ಸಂಘದ ವತಿಯಿಂದ ಸತೀಶ ಬೆಳ್ಳಕ್ಕಿ ದಂಪತಿಗಳಿಗೆ ಮಂಗಳವಾರ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಸನ್ಮಾನ ಸಮಾರಂಭದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಸತೀಶ ಬೆಳ್ಳಕ್ಕಿ ಅವರು ಮಿತಭಾಷಿ. ಆದರೆ, ಅವರ ಬರಹ ಸಮಾಜದ ಅನೇಕ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿದೆ. ಮುಂದಿನ ದಿನಗಳಲ್ಲಿ ಅವರ ವೃತ್ತಿ ಬದುಕು ಇನ್ನಷ್ಟು ಬೆಳೆದು, ಮಾಧ್ಯಮ ಕ್ಷೇತ್ರದಲ್ಲಿ ಉನ್ನತ ಸ್ಥಾನ ಅಲಂಕರಿಸುವಂತಾಗಲಿ ಎಂದು ಹಾರೈಸಿದರು. ವರ್ಗಾವಣೆಗೊಂಡ ಸತೀಶ ಬೆಳ್ಳಕ್ಕಿ ಅವರ ಒಡನಾಟ ಕುರಿತು ಕಾನಿಪ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಅರುಣಕುಮಾರ ಹಿರೇಮಠ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ವೆಂಕಟೇಶ ಇಮರಾಪೂರ, ರುದ್ರಗೌಡ ಪಾಟೀಲ, ಗಿರೀಶ ಕಮ್ಮಾರ, ಹಿರಿಯ ಪತ್ರಕರ್ತ, ಕನ್ನಡಮ್ಮ ವರದಿಗಾರ ಬಸವರಾಜ ದಂಡಿನ, ವಿಜಯವಾಣಿ ವರದಿಗಾರ ಶಿವಾನಂದ ಹಿರೇಮಠ, ಕನ್ನಡ ಪ್ರಭ ವರದಿಗಾರ ಶಿವಕುಮಾರ ಕುಷ್ಟಗಿ, ವಿಜಯ ಕರ್ನಾಟಕ ವರದಿಗಾರ ಸಲೀಂ ಬಳಬಟ್ಟಿ, ನ್ಯೂಸ್ ಫರ್ಸ್ಟ್ ವರದಿಗಾರ ಸುರೇಶ ಕಡ್ಲಿಮಟ್ಟಿ, ಕಾಶೀನಾಥ ಬಿಳಿಮಗ್ಗದ, ಸೇರಿ ಅನೇಕ ಹಿರಿಯ-ಕಿರಿಯ ಮಾಧ್ಯಮ ಮಿತ್ರರು ಅಭಿಪ್ರಾಯ ಹಂಚಿಕೊಂಡರು.

ಬಳಿಕ ಸತೀಶ ಬೆಳ್ಳಕ್ಕಿ ದಂಪತಿಗಳಿಗೆ ಸಂಘದಿಂದ ಗೌರವಿಸಿ, ಸನ್ಮಾನಿಸಿ ಬೀಳ್ಕೊಡಲಾಯಿತು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ವೇದಿಕೆಯಲ್ಲಿದ್ದರು. ಈ ಸಂದರ್ಭದಲ್ಲಿ ಖಜಾಂಚಿ ರಾಮು ವಗ್ಗಿ, ಕಾರ್ಯದರ್ಶಿ ಬನೇಶ ಕುಲಕರ್ಣಿ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ಸಂತೋಷ ಕೊಣ್ಣೂರ, ಪ್ರಜಾಪ್ರಗತಿ ವರದಿಗಾರ ಮಾಳಿಂಗರಾಯ ಪೂಜಾರ, ಜಿಲ್ಲೆಯ ವಿವಿಧ ತಾಲ್ಲೂಕು ಮತ್ತು ಹೋಬಳಿಯ ವರದಿಗಾರರಾದ ನಾಗರಾಜ ಹಣಗಿ, ಚಂದ್ರು ಭಜಂತ್ರಿ, ಚಂದ್ರು ರಾಠೋಡ, ಶ್ರೀಶೈಲ ಕುಂಬಾರ, ನಿಂಗಪ್ಪ ಹಮ್ಮಗಿ, ಛಾಯಾಗ್ರಾಹಕ ಶಂಕರ ಗುರಿಕಾರ, ಪವರ್ ಟಿವಿಯ ಮಹಾಂತೇಶ ಹೂಗಾರ, ಲಿಂಗರಾಜ ಎಂ.ಆರ್., ಜಾಹೀರಾತು ಪ್ರತಿನಿಧಿಗಳಾದ ಶರಣು ಮೆಣಸಿನಕಾಯಿ, ದೊಡ್ಡೇಶ, ಪತ್ರಿಕಾ ಭವನದ ಪರಶು ಹಳ್ಳದ ಸೇರಿ ಹಲವರಿದ್ದರು.

# ಜಮೀನು ವಿವಾದ: ಜಗಳ ತಾರಕಕ್ಕೇರಿ ಫೈರಿಂಗ್, ಯುವಕನಿಗೆ ಗಾಯ

**ಬೆಳಗಾವಿ ವಾರ್ತೆ ಧಾರವಾಡ:** ಜಮೀನು ವಿಷಯಕ್ಕೆ ಸಂಬಂಧಿಸಿದಂತೆ ಎರಡು ಗುಂಪುಗಳ ಮಧ್ಯೆ ತೀವ್ರ ಮಾರಾಮಾರಿ ನಡೆದು ಕೊನೆಗೆ ಗುಂಡಿನ ಸದ್ದು ಕೇಳಿ ಬಂದಿದ್ದು, ಘಟನೆಯಲ್ಲಿ ಯುವಕನೋರ್ವನ ಕಾಲಿಗೆ ಗಾಯವಾದ ಘಟನೆ ಇಲ್ಲಿಯ ತಡಸಿನಕೊಪ್ಪದಲ್ಲಿ ಮಂಗಳವಾರ ಮಧ್ಯಾಹ್ನ ಸಂಭವಿಸಿದೆ.

ತಡಸಿನಕೊಪ್ಪ ಗ್ರಾಮದ ನಿವಾಸಿ ವಿಠ್ಠಲ ವಾಲೀಕಾರ(24) ಎಂಬಾತನ ಕಾಲಿಗೆ ಗುಂಡು ಬಿದ್ದಿದ್ದು, ಆತನಿಗೆ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಒದಗಿಸಲಾಗುತ್ತಿದೆ. ಆಸ್ಪತ್ರೆಗೆ ಪೊಲೀಸ್ ಆಯುಕ್ತ ಎನ್. ಶಶಿಕುಮಾರ, ಎಸಿಪಿ ಪ್ರಶಾಂತ ಸಿದ್ಧನಗೌಡರ ಸೇರಿದಂತೆ ಇತರರು ಭೇಟಿ ನೀಡಿ ಮಾಹಿತಿ ಪಡೆದುಕೊಂಡಿದ್ದಾರೆ.

**ಏನಿದು ಪ್ರಕರಣ ?:** ಇಲ್ಲಿಯ ಐಐಐಟಿ ಬಳಿ 5 ಎಕರೆ ಖಾಸಗಿ ಜಮೀನು ಇದ್ದು, ಇದರಲ್ಲಿ ವಿಠ್ಠಲ ವಾಲೀಕಾರ ಎಂಬಾತನಿಗೆ ಸೇರಿದ 2 ಎಕರೆ ಜಮೀನು ಇತ್ತು. ಮಂಗಳವಾರ ಹುಬ್ಬಳ್ಳಿ ಮೂಲದ ಸುಂದರ ಪಾಲ್ ಮತ್ತು ಚಂದ್ರು ಪಾಲ್ ಎಂಬುವವರು ತಮ್ಮ ಖಾಸಗಿ ಗನ್‌ಮ್ಯಾನ್‌ಗಳ ಜೊತೆಗೆ ಮತ್ತು ಬೆಂಬಲಿಗರೊಂದಿಗೆ ಆಗಮಿಸಿ ಖಾಸಗಿ ಕಂಪನಿಯೊಂದಿಗೆ ಡೆವಲಪ್ ಮಾಡಲಾಗುತ್ತಿದೆ ಎಂದು ತಕರಾರು ತೆಗೆದಿದ್ದಾರೆ.

ಆಗ ವಿಠ್ಠಲ ಮತ್ತು ಆತನ ಸಹೋದರ ಮಾರುತಿ ಹಿಂಡಸಗೇರಿ ಸೇರಿದಂತೆ ಇತರರು ಇದರಲ್ಲಿ ನಮ್ಮ ಜಮೀನು ಇದೆ. ಅದನ್ನು ಬಿಟ್ಟು ಇನ್ನುಳಿದ ಜಮೀನಿನಲ್ಲಿ ನೀವು ಏನಾದರೂ ಮಾಡಿಕೊಳ್ಳಿರಿ ಎಂದು ತಿಳಿಸಿದ್ದಾರೆ. ಇದರಿಂದ ಆಕ್ರೋಶಗೊಂಡ ಸುಂದರ್ ಪಾಲ್ ಮತ್ತು ಚಂದ್ರು ಪಾಲ್ ವಿಠ್ಠಲನೊಂದಿಗೆ ವಾಗ್ವಾದ ನಡೆಸಿದ್ದಾರೆ. ಮಾತಿಗೆ ಮಾತು ಬೆಳೆದು ಎರಡೂ ಗುಂಪಿನ ಮಧ್ಯೆ ಮಾರಾಮಾರಿ ನಡೆದಿದೆ.

ಆಗ ಡೆವಲಪರ್‌ಗಳೇ ಸ್ವತಃ ತಮ್ಮ ಬಳಿ ಇದ್ದ ಕಂಟ್ರಿ ಪಿಸ್ತೂಲ್ ತೆಗೆದು ಮೊದಲು ಗಾಳಿಯಲ್ಲಿ ಗುಂಡು ಹಾರಿಸಿದ್ದಾರೆ. ನಂತರ ಕೆಳಗಡೆ ಮುಖ



ಮಾಡಿ ಗುಂಡು ಹಾರಿಸುವ ಸಂದರ್ಭದಲ್ಲಿ ವಿಠ್ಠಲ ಬಲಗಾಲಿನ ಕಿರುಬೆರಳಿಗೆ ತಾಗಿದ್ದು, ಆತನನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಲ್ಲದೇ ಖಾಸಗಿ ಗನ್‌ಮ್ಯಾನ್‌ಗಳನ್ನು ವಶಕ್ಕೆ ಪಡೆದಿದ್ದಾರೆ. ಈ ಕುರಿತು ವಿದ್ಯಾಗಿರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001